ಸಂಪುಟ : 11 ಸಂಚಿಕೆ: 26 ಪುಟ : 4+2 ಬೆಲೆ: 3.00 ಮಂಗಳವಾರ ಫೆಬ್ರವರಿ 24 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 26 Pages : 4+2 Price : 3.00 Tuesday February 24 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026-27ನೇ ಸಾಲಿನ ಜನಸೇವಾ ವಿದ್ಯಾಕೇಂದ್ರಕ್ಕೆ 5ನೇ ತರಗತಿ (ಕನ್ನಡ ಮಾಧ್ಯಮ) ಹಾಗೂ 8ನೇ ತರಗತಿ (ಕನ್ನಡ ಮತ್ತು ಆಂಗ್ಲ ಮಾಧ್ಯಮ)ಗಳಿಗೆ ಪ್ರವೇಶ ಪಡೆಯಲು ಪ್ರವೇಶ ಪರೀಕ್ಷೆಯನ್ನು 08-03-2026 ರಂದು ನಡೆಸಲಾಗುತ್ತದೆ.

ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಜನಸೇವಾ ವಿದ್ಯಾ-ಕೇಂದ್ರ ಹಾಗೂ ಶ್ರೀ ರಾಮಕೃಷ್ಣ ಮಾದರಿ ಶಾಲೆ (ಚನ್ನೇನಹಳ್ಳಿ) ಯಲ್ಲಿ ಪ್ರವೇಶ ಬಯಸಿದರೆ, ಪ್ರವೇಶಾತಿ ಪರೀಕ್ಷೆಗೆ ಹಾಜರಾಗಲು ಅಗತ್ಯ ದಾಖಲಾತಿಗಳೊಂದಿಗೆ ಮಾರ್ಚ್ 02, 2026ರೊಳಗಾಗಿ ಸಮಾಜ ಕಲ್ಯಾಣ ಇಲಾಖೆಯ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬಹುದು.

## ಫೆ. 27 ರಂದು ಜಿಲ್ಲಾ ಮಟ್ಟದ ಜನತಾ ದರ್ಶನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಫೆಬ್ರವರಿ 27ರಂದು ಗದಗ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ್ ಅವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದೆ.


ಜಿಲ್ಲಾಡಳಿತವು ಕಾರ್ಯಕ್ರಮವನ್ನು ಪರಿಣಾಮ ಕಾರಿಯಾಗಿ ಆಯೋಜಿಸಲು ಕ್ರಮ ಕೈಗೊಂಡಿದ್ದು, ಸಾರ್ವಜನಿಕರ ಅಹವಾಲುಗಳಿಗೆ ತ್ವರಿತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಮನವಿಗಳನ್ನು ಸ್ವೀಕರಿಸಲು ಫೆಬ್ರವರಿ 16, 2026ರಿಂದಲೇ ಗದಗ ಜಿಲ್ಲಾಡಳಿತ ಭವನ ಹಾಗೂ ಜಿಲ್ಲೆಯ ಎಲ್ಲಾ ತಾಲೂಕಿನ ತಹಶೀಲ್ದಾರ್ ಕಚೇರಿಗಳಲ್ಲಿ ಅರ್ಜಿ ಸ್ವೀಕಾರ ಕೇಂದ್ರಗಳನ್ನು ಆರಂಭಿಸಲಾಗಿದೆ.

ತಾಲೂಕು ಮಟ್ಟದಲ್ಲಿ ಸ್ವೀಕರಿಸಲಾದ ಅರ್ಜಿಗಳನ್ನು ಪ್ರತಿದಿನ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಲಾಗುವುದು. ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಡಂಗುರ ಸಾರುವ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ. ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಅರ್ಜಿದಾರರ ಮನವಿಗಳಿಗೆ ನಿಯಮಾನುಸಾರ ಪರಿಹಾರ ಒದಗಿಸಲು ಕ್ರಮ ಜರುಗಿಸಲಿದ್ದಾರೆ.

ಫೆಬ್ರವರಿ 27ರಂದು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ನಡೆಯುವ ಜನತಾ ದರ್ಶನ ಕಾರ್ಯಕ್ರಮದಲ್ಲಿ, ಅರ್ಜಿದಾರರ ಮನವಿಗಳಿಗೆ ನೀಡಿರುವ ಪರಿಹಾರ ಹಾಗೂ ಅಗತ್ಯ ದಾಖಲೆಗಳೊಂದಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಾಗಿ ತಕ್ಷಣದ ಸ್ಪಂದನೆ ನೀಡಲಿದ್ದಾರೆ.

ಸಾ ವ್ ರ್ ಜ ನಿ ಕ ರ ು ಈ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಸಿ ಎನ್ ಶ್ರೀಧರ್ ತಿಳಿಸಿದ್ದಾರೆ.

## ಫೆ.26ರಂದು ತಾಲೂಕ ಮಟ್ಟದ ಮಾಸಿಕ ಪಂಚ ಗ್ಯಾರಂಟಿ ಸಭೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕ ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ತಾಲೂಕ ಮಟ್ಟದ ಮಾಸಿಕ ಗ್ಯಾರಂಟಿ ಸಭೆಯನ್ನು ಫೆಬ್ರವರಿ 26ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಭೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ, ಸಾರ್ವಜನಿಕರಿಂದ ಬಂದ ಅರ್ಜಿಗಳ ನಿವಾರಣೆ ಹಾಗೂ ಯೋಜನೆಗಳ ಪರಿಣಾಮಕಾರಿ ಅನುಷ್ಠಾನ ಕುರಿತು ಚರ್ಚೆ ನಡೆಯಲಿದೆ. ಈ ಕುರಿತು ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶಾಸಕ ಡಾ. ಚಂದ್ರು ಲಮಾಣಿ ಶಾಸಕ ಸ್ಥಾನದಿಂದ ಅಮಾನತ್ತಿಗೆ ಆಗ್ರಹಿಸಿ ರಾಜ್ಯಪಾಲರಿಗೆ ಮನವಿ

# ಬೇರೊಬ್ಬರ ಮೇಲೆ ದೋಷಾರೋಪಣೆ ಮಾಡುವುದು ತಪ್ಪು



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸೋಮವಾರ ಶಿರಹಟ್ಟಿಯ ಬ್ಲಾಕ್ ಕಾಂಗ್ರೆಸ್ ಕಮಿಟಿ ವತಿಯಿಂದ ಶಾಸಕ ಡಾ. ಚಂದ್ರು ಲಮಾಣಿಯವರನ್ನು ಶಾಸಕ ಸ್ಥಾನದಿಂದ ಅಮಾನತ್ತು ಮಾಡಿ ಸದಸ್ಯತ್ವ ರದ್ದುಗೊಳಿಸಬೇಕೆಂದು ಆಗ್ರಹಿಸಿ ತಹಸೀಲ್ದಾರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಗುತ್ತಿಗೆದಾರನಿಂದ ಕಮೀಷನ್ ಹಣ (ಲಂಚ) ಸ್ವೀಕರಿಸುತ್ತಿದ್ದ ವೇಳೆ ರೆಡ್‌ಹ್ಯಾಂಡ್ ಆಗಿ ಲೋಕಾಯುಕ್ತ ಅಧಿಕಾರಿಗಳ ಬಲೆಗೆ ಬಿದ್ದರುವ ಶಿರಹಟ್ಟಿ ಮೀಸಲು ಮತಕ್ಷೇತ್ರದ ಬಿಜೆಪಿ ಶಾಸಕ ಡಾ. ಚಂದ್ರು ಲಮಾಣಿ ತಕ್ಷಣ ರಾಜೀನಾಮೆ ನೀಡಿ ತನಿಖೆ ಎದುರಿಸಬೇಕು. ಕಾಂಗ್ರೆಸ್ ಪಕ್ಷದ ನಾಯಕರ ಕೈವಾಡವಿದೆ ಎಂದು ಬೇರೊಬ್ಬರ ಮೇಲೆ ಗೂಬೆ ಕೂರಿಸುವ ಕೆಲಸ ಆಗಬಾರದು. ಭ್ರಷ್ಟಾಚಾರ ಮಾಡಿರುವ ವ್ಯಕ್ತಿ ತನ್ನ ತಪ್ಪನ್ನು ಒಪ್ಪಿಕೊಳ್ಳದೇ ಬೇರೊಬ್ಬರ ಮೇಲೆ ದೋಷಾರೋಪಣೆ ಮಾಡುವುದು ನೈತಿಕವಾಗಿ ಹಾಗೂ ಕಾನೂನುಬದ್ಧವಾಗಿ ತಪ್ಪಾಗಿದೆ. ಸಾರ್ವಜನಿಕ ಜೀವನದಲ್ಲಿರುವವರು ಹೇಗೆ ನಡೆದುಕೊಳ್ಳಬೇಕು ಎನ್ನುವ ಪರಿಜ್ಞಾನ ಇಲ್ಲದ ಶಾಸಕ ಪಾರದರ್ಶಕ ತನಿಖೆಗೆ ಸಹಕರಿಸಬೇಕು. ನೈತಿಕ ಹೊಣೆಗಾರಿಕೆ ವಹಿಸಿ ಶಾಸಕ ಸ್ಥಾನಕ್ಕೆ ಈ ಕೂಡಲೇ ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು.

ಮಾಜಿ ಶಾಸಕ ರಾಮಣ್ಣ ಲಮಾಣಿ ಮಾತನಾಡಿ, ಉತ್ತರ ಕರ್ನಾಟಕದ ಇತಿಹಾಸದಲ್ಲೇ ತಾಲೂಕಿನಲ್ಲಿ ಯಾವ ಶಾಸಕರೂ ಇಂತಹ ಭ್ರಷ್ಟಾಚಾರದಲ್ಲಿ ಸಿಲುಕಿರುವುದು ಕಂಡುಬಂದಿಲ್ಲ. ಆದರೆ ಹೆಚ್ಚು ಕಲಿತು ವೈದ್ಯಕೀಯ ಸೇವೆ ಮಾಡಿರುವ ಬಿಜೆಪಿ ಶಾಸಕ ಡಾ. ಚಂದ್ರು ಲಮಾಣಿ ಭ್ರಷ್ಟಾಚಾರ ನಡೆಸಿ, ತನ್ನ ಒಡೆತನದ ಬಾಲಾಜಿ ಆಸ್ಪತ್ರೆಯಲ್ಲಿ ಕಮೀಷನ್ ಹಣ ಪಡೆಯುವಾಗ ಲೋಕಾಯುಕ್ತ ಅಧಿಕಾರಿಗಳು ನಡೆಸಿದ ದಾಳಿಯಲ್ಲಿ ಸಿಲುಕಿ ತಾಲೂಕಿನ ಮರ್ಯಾದೆಯನ್ನು ಹರಾಜು ಹಾಕಿದ್ದಾರೆ. ಇವರು ಶಾಸಕ ಸ್ಥಾನದಲ್ಲಿ ಮುಂದುವರೆಯುವ ಯಾವ ನೈತಿಕತೆಯನ್ನು ಉಳಿಸಿಕೊಂಡಿಲ್ಲ. ಭ್ರಷ್ಟಾಚಾರ ನಡೆಸಿ ರೂ. 5 ಲಕ್ಷ ಹಣದ ಸಮೇತ ಅಧಿಕಾರಿಗಳ ಕೈಗೆ ಸಿಕ್ಕಿರುವುದರಿಂದ ನ್ಯಾಯಾಧೀಶರ ಆದೇಶದಂತೆ ಪೊಲೀಸರು ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹಕ್ಕೆ ಕರೆದೊಯ್ದಿದ್ದು,

> ರಾಜ್ಯ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ, ಜಿ.ಪಂ ಮಾಜಿ ಅಧ್ಯಕ್ಷೆ ಸುಜಾತ ದೊಡ್ಡಮನಿ ಮಾತನಾಡಿ, ಶಾಸಕ ಚಂದ್ರು ಲಮಾಣಿ ಮಾಡಬಾರದ ಕೆಲಸ ಮಾಡಿ ಕ್ಷೇತ್ರಕ್ಕೆ ಮಸಿ ಬಳಿಯುವ ಕೆಲಸ ಮಾಡಿದ್ದು, ಕಾಂಗ್ರೆಸ್ ಪಕ್ಷದ ಹಿರಿಯ ನಾಯಕ, ಸಚಿವ ಎಚ್. ಕೆ. ಪಾಟೀಲರನ್ನು ದೂರುತ್ತಿರುವುದು ಸರಿಯಲ್ಲ. ನಿಮ್ಮ ತಪ್ಪು ಮುಚ್ಚಿಕೊಳ್ಳಲು ಮತ್ತೊಬ್ಬರ ಮೇಲೆ ಆರೋಪ ಮಾಡುವುದು ಸರಿಯಲ್ಲ. ತಕ್ಷಣ ರಾಜೀನಾಮೆ ನೀಡಿ ತನಿಖೆಗೆ ಸಹಕರಿಸಬೇಕು ಎಂದು ಆಗ್ರಹಿಸಿದರು.

ಶಾಸಕ ಕೂಡಲೇ ರಾಜೀನಾಮೆ ನೀಡಿ ತನಿಖೆ ಎದುರಿಸಬೇಕು ಎಂದು ಒತ್ತಾಯಿಸಿದರು.

ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಕಮಿಟಿ ಅಧ್ಯಕ್ಷ ಹುಮಾಯೂನ್ ಮಾಗಡಿ, ಡಿ.ಕೆ. ಹೊನ್ನಪ್ಪನವರ, ಚನ್ನಪ್ಪ ಜಗಲಿ, ವಿರೇಂದ್ರ ಪಾಟೀಲ, ಶಿವನಗೌಡ ಪಾಟೀಲ, ಮಂಜುನಾಥ ಘಂಟಿ ಮಾತನಾಡಿದರು. ಇದಕ್ಕೂ ಮೊದಲು ಪಟ್ಟಣದ ಶ್ರೀ ಮಾರುತಿ ದೇವಸ್ಥಾದಿಂದ ಬೃಹತ್ ಪ್ರತಿಭಟನೆ ನಡೆಸಿ, ಬಸವೇಶ್ವರ ವೃತ್ತ, ಸಂಗೊಳ್ಳಿ ರಾಯಣ್ಣ ವೃತ್ತ, ನೆಹರು ವೃತ್ತದ ಮಾರ್ಗವಾಗಿ ತಮಟೆ ಬಾರಿಸುತ್ತ ಕಾರ್ಯಕರ್ತರು ಧಿಕ್ಕಾರದ ಘೋಷಣೆ ಕೂಗುತ್ತಾ ತಹಸೀಲ್ದಾರ ಕಾರ್ಯಾಲಯಕ್ಕೆ ಆಗಮಿಸಿ ಮನವಿ ಸಲ್ಲಿಸಿದರು. ಮುಖಂಡರಾದ ಮಹೇಂದ್ರ ಮುಂಡವಾಡ, ಲಕ್ಷ್ಮಣಗೌಡ ಪಾಟೀಲ, ಫಕ್ಕಿರೇಶ ಮ್ಯಾಟಣ್ಣವರ, ಚನ್ನಪ್ಪ ಜಗಲಿ, ವಿರೂಪಾಕ್ಷ ನಂದೆಣ್ಣವರ, ಹೊನ್ನಪ್ಪ ಶಿರಹಟ್ಟಿ, ಬುಡನಶ್ಯಾ ಮಕಾನದಾರ, ಶಿವನಗೌಡ ಪಾಟೀಲ, ರಮೇಶ ನಿರ್ವಾಣಶೆಟ್ಟರ, ಎಂ.ಕೆ. ಲಮಾಣಿ, ಮಹಾಂತೇಶ ದಶಮನಿ, ಅಜ್ಜುಗೌಡ್ರ ಪಾಟೀಲ, ಸೋಮನಗೌಡ ಮರಿಗೌಡ್ರ, ಚಾಂದಸಾಬ ಮುಳಗುಂದ, ದೇವಪ್ಪ ಲಮಾಣಿ, ಅಶ್ರತಅಲಿ ಢಾಲಾಯತ, ಮಾಬೂಸಾಬ ಲಕ್ಷ್ಮೇಶ್ವರ, ಈರಣ್ಣ ಚವ್ಹಾಣ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

### ಕಾಂಗ್ರೆಸ್ ಪಕ್ಷದ, ಮುಖಂಡರ ಮೇಲೆ ಬಿಜೆಪಿ ಹೊರಿಸಿದ ಆರೋಪಕ್ಕೆ ವಿರೋಧ

# ಶಾಸಕ ಡಾ. ಚಂದ್ರು ಜನರಿಗೆ ದ್ರೋಹವೆಸಗಿದ್ದಾರೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಾಸಕ ಡಾ. ಚಂದ್ರು ಲಮಾಣಿ ಭ್ರಷ್ಟಾಚಾರದ ಪ್ರಕರಣದಲ್ಲಿ ನ್ಯಾಯಾಗ ಬಂಧನಕ್ಕೊಳಗಾಗಿದ್ದು ಈ ಕ್ಷೇತ್ರದ ಜನರ ನಂಬಿಕೆ, ವಿಶ್ವಾಸಕ್ಕೆ ದ್ರೋಹ ಮಾಡಿದ್ದಾರೆ. ಇವರಿಗೆ ಅಧಿಕಾರದಲ್ಲಿ ಮುಂದುವರೆಯುವ ಯಾವುದೇ ನೈತಿಕ ಹಕ್ಕಿಲ್ಲದ ಕಾರಣ ಕೂಡಲೇ ರಾಜೀನಾಮೆ ಕೊಟ್ಟು ಪ್ರಾಮಾಣಿಕವಾಗಿ ವೈದ್ಯರ ವೃತ್ತಿ ಮುಂದುವರೆಸಬೇಕು ಎಂದು ಮಾಜಿ ಶಾಸಕರಾದ ರಾಮಣ್ಣ ಲಮಾಣಿ ಮತ್ತು ರಾಮಕೃಷ್ಣ ದೊಡ್ಡಮನಿ ಆಗ್ರಹಿಸಿದರು.

ಅವರು ಸೋಮವಾರ ಪಟ್ಟಣದಲ್ಲಿ ಶಾಸಕರ ಮನೆ ಮೇಲೆ ಲೋಕಾದಾಳಿಯಾದ ವೇಳೆ ಬಿಜೆಪಿ ಕಾರ್ಯಕರ್ತರು ಇದು ಕಾಂಗ್ರೆಸ್ ಪಕ್ಷ ಮತ್ತು ಹೆಚ್. ಕೆ. ಪಾಟೀಲರ ಷಡ್ಯಂತ್ರ ಎಂಬ ಸುಳ್ಳು ಆರೋಪ ಮಾಡಿರುವುದನ್ನು ಖಂಡಿಸಿ ಕಾಂಗ್ರೆಸ್ ಪಕ್ಷದಿಂದ ನಡೆಸಿದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಶಿರಹಟ್ಟಿ ಮತಕ್ಷೇತ್ರ ರಾಜಕೀಯ ಕ್ಷೇತ್ರದಲ್ಲಿ ಉತ್ತಮ ಹೆಸರು ಮಾಡಿದೆ. ದಿ. ಉಪನಾಳ ಗೂಳಪ್ಪನವರು, ಟಿ.ಬಿ. ಬಾಳಿಕಾಯಿ, ಎಸ್.ಎಸ್. ಪಾಟೀಲ, ಜಿ.ಎಂ. ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ ಮತ್ತು ನಾನು ಸೇರಿ ಕ್ಷೇತ್ರದ ಅಭಿವೃದ್ಧಿಯ

> ಕೆಪಿಸಿಸಿ ಸದಸ್ಯೆ ಸುಜಾತಾ ದೊಡ್ಡಮನಿ, ಚನ್ನಪ್ಪ ಜಗಲಿ, ಕಾಂಗ್ರೆಸ್ ಬ್ಲಾಕ್ ಕಮಿಟಿ ಅಧ್ಯಕ್ಷ ಜಿ.ಆರ್. ಕೊಪ್ಪದ, ಫಕ್ಕಿರೇಶ ಮ್ಯಾಟಣ್ಣವರ, ವಿರೇಂದ್ರ ಪಾಟೀಲ, ನಾಗರಾಜ ಮಡಿವಾಳರ, ಎಸ್.ಪಿ. ಬಳಿಗಾರ, ಶರಣು ಗೋಡಿ, ಸೋಮಣ್ಣ ಬೆಟಗೇರಿ ಮಾತನಾಡಿ, ಭ್ರಷ್ಟಾಚಾರದಿಂದ ಶಿಕ್ಷೆಗೊಳಗಾದ ಶಾಸಕನನ್ನು ಬಿಜೆಪಿ ಸಮರ್ಥಿಸಿಕೊಂಡರೆ, ಬೆಂಬಲಿಸಿದರೆ ಇದು ಬಿಜೆಪಿ ಸಂಸ್ಕೃತಿಯನ್ನು ಸಾಕ್ಷೀಕರಿಸಿದಂತಾಗುತ್ತದೆ. ಬಿಜೆಪಿಗರ ಹೋರಾಟಕ್ಕೆ ಯಾರೂ ಬೆಂಬಲ ನೀಡಬಾರದು. ಹಾಗೇನಾದರೂ ಆದರೆ ಇದಕ್ಕೆ ಕಾಂಗ್ರೆಸ್ ಪಕ್ಷವೂ ದಿಟ್ಟ ಹೋರಾಟಕ್ಕೆ ಸಿದ್ಧ ಎಂದರು.

ಜೊತೆಗೆ ಕ್ಷೇತ್ರಕ್ಕೆ ಹೆಸರು ತರುವ ಕೆಲಸ ಮಾಡಿದ್ದೇವೆ. ಆದರೆ ವಿದ್ಯಾವಂತನೆಂದು ಜನರು ಕೊಟ್ಟ ಅವಕಾಶವನ್ನು ದುರುಪಯೋಗ ಮಾಡಿಕೊಂಡು ಲಂಚದ ಮೂಲಕ ಕ್ಷೇತ್ರಕ್ಕೆ ಮಸಿ ಬಳಿಯುವ ಕೆಲಸ ಮಾಡಿದ್ದಾರೆ. ವಿದ್ಯೆ ಇದ್ದರೂ ವಿನಯ, ಸಂಸ್ಕಾರವೇ ಇಲ್ಲದ ಅಧಿಕಾರದ ಮದದಿಂದ ಕ್ಷೇತ್ರದ ಅಭಿವೃದ್ಧಿಯ ಹಣ ಕೊಳ್ಳೆ ಹೊಡೆದುಕೊಂಡು ಹೋಗುವ ಇವರಿಂದ ಯಾವುದೇ ಅಭಿವೃದ್ಧಿ ಸಾಧ್ಯವಿಲ್ಲ. ಜೀವಬೆದರಿಕೆ, ಜಾತಿನಿಂದನೆ ಕೇಸ್ ಮಾಡಿಸುವ ಸಂಸ್ಕೃತಿಯ ಶಾಸಕನಿಂದ ಜನ ರೋಸಿ ಹೋಗಿದ್ದಾರೆ. ಪಕ್ಷಕ್ಕೆ ನೈತಿಕ ಹಕ್ಕಿದ್ದರೆ ಬಿಜೆಪಿ ಪಕ್ಷದವರು ಮತ್ತು ಜನರ ಹಿತದೃಷ್ಟಿಯಿಂದ ರಾಜ್ಯಪಾಲರು ಇವರ ರಾಜೀನಾಮೆ ಪಡೆಯಬೇಕು ಎಂದು ಒತ್ತಾಯಿಸಿದರು.

>> 3ನೇ ಪುಟಕ್ಕೆ

## ಅಕಾಲಿಕ ಮಳೆ ಆತಂಕ: ಬೆಳೆಗಳಿಗೆ ಹಾನಿಯ ಭೀತಿ!



■ವಿಜಯಸಾಕ್ಷಿ ಸುದ್ದಿ, ಡಂಬಳ

ಬಂಗಾಳ ಕೊಲ್ಲಿಯಲ್ಲಿ ಉಂಟಾದ ವಾಯುಭಾರ ಕುಸಿತದ ಪರಿಣಾಮವಾಗಿ ಡಂಬಳ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಸೋಮವಾರ ಸುರಿದ ಅಕಾಲಿಕ ಮಳೆ ರೈತರಲ್ಲಿ ಆತಂಕ ಸೃಷ್ಟಿಸಿದೆ. ಜೋಳ, ಕಡ್ಲೆ, ಗೋಧಿ ಹಾಗೂ ಸೂರ್ಯಕಾಂತಿ ಸೇರಿದಂತೆ ವಿವಿಧ ಬೆಳೆಗಳಿಗೆ ಹಾನಿಯಾಗುವ ಸಾಧ್ಯತೆ ಇದೆ ಎಂದು ರೈತರು ತಿಳಿಸಿದ್ದಾರೆ.

ಮಳೆಯ ಪರಿಣಾಮವಾಗಿ ಜೋಳದ ಕಾಳುಗಳಲ್ಲಿ ತೇವಾಂಶ ಹೆಚ್ಚಾಗಿ ಗುಣಮಟ್ಟ ಕುಸಿಯುವ ಭೀತಿ ಎದುರಾಗಿದೆ. ಕಟಾವಿಗೆ ಬಂದಿರುವ ಕಡ್ಲೆ ಬೆಳೆ ಮಳೆಯಿಂದ ಹಾನಿಗೊಳಗಾಗುವ ಸಾಧ್ಯತೆ ಇದೆ. ಸೂರ್ಯಕಾಂತಿ ಬೆಳೆ ಹೂವಿನ ಹಂತದಲ್ಲಿದ್ದು, ಮಳೆ ಮುಂದುವರಿದರೆ ಇಳುವರಿ ಮೇಲೆ ಪ್ರತಿಕೂಲ ಪರಿಣಾಮ ಬೀರುವ ಸಾಧ್ಯತೆ ಇದೆ.

ಮೇವು ಸಂರಕ್ಷಣೆ ಕಾರ್ಯ ಜೋಳದ ಮೇವು ಹಾಗೂ ಸೆಂಗಾಹೊಟ್ಟು ಹಾನಿಯಾಗದಂತೆ ರೈತರು ತಾಡಫಲಗಳಿಂದ ಮುಚ್ಚುವ ಕಾರ್ಯದಲ್ಲಿ ತೊಡಗಿದ್ದಾರೆ. ಹೊಲಗಳಲ್ಲಿ ನೀರು ನಿಲ್ಲದಂತೆ ಕಾಲುವೆ ತೆಗೆಯುವುದು ಹಾಗೂ ಮೇವನ್ನು ಎತ್ತಿ ಒಣಗಿಸುವ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಇಟ್ಟಂಗಿ ಬಟ್ಟಿಗಳಿಗೂ ಹೊಡೆತ ಈ ಭಾಗದ ಗುಡಿಕೈಗಾರಿಕೆಯಾಗಿರುವ ಇಟ್ಟಂಗಿ ಬಟ್ಟಿಗಳಲ್ಲಿ ತಯಾರಿಸಿದ ಇಟ್ಟಂಗಿಗಳನ್ನು ಮಳೆಯಿಂದ ರಕ್ಷಿಸಲು ತಾಡಫಲಗಳಿಗೆ ಮೊರೆ ಹೋಗಲಾಗಿದೆ. ಲಕ್ಷಾಂತರ ರೂಪಾಯಿ ಸಾಲದಲ್ಲಿ ತಯಾರಿಸಿದ ಇಟ್ಟಂಗಿಗಳಿಗೆ ಹಾನಿಯಾಗುವ ಭೀತಿ ಇದೆ ಎಂದು ಕಾರ್ಮಿಕರು ತಿಳಿಸಿದ್ದಾರೆ.

ಮಾವು, ಹುಣಸೆ ಬೆಳೆಗಾರರಲ್ಲಿ ಆತಂಕ ಮಾವಿನ ಗಿಡಗಳಲ್ಲಿ ಹೂವು ಮತ್ತು ಸಣ್ಣ ಕಾಯಿಗಳು ಇರುವ ಹಂತದಲ್ಲಿ ಮಳೆ ಸುರಿದಿದ್ದು, ಅವು ಉದುರುವ ಆತಂಕ ವ್ಯಕ್ತವಾಗಿದೆ. ಬೇಸಿಗೆಯಲ್ಲಿ ಮಾರಾಟಕ್ಕೆ ಸಿದ್ಧವಾಗಿರುವ ಹುಣಸೆಹಣ್ಣಿನ ಮೇಲೂ ಮಳೆಯ ಪರಿಣಾಮ ಬೀರುವ ಸಾಧ್ಯತೆ ಇದೆ.

"ಜೋಳ ಹಾಗೂ ಸೂರ್ಯಕಾಂತಿ ಬೆಳೆ ಹೂವಿನ ಹಂತದಲ್ಲಿವೆ. ಕಡ್ಲೆ ಬೆಳೆ ಕಟಾವಿಗೆ ಬಂದಿದೆ. ಇಂತಹ ಅಕಾಲಿಕ ಮಳೆಯಿಂದ ಬೆಳೆ ಹಾನಿಯಾದರೆ ರೈತರಿಗೆ ಆರ್ಥಿಕ ಸಂಕಷ್ಟ ಎದುರಾಗಲಿದೆ," ಎಂದು ಯಮನೂರ ದೊಡ್ಡಮನಿ, ನಿಂಗಪ್ಪ ಪಲ್ಲೇದ, ಸಿದ್ದಪ್ಪ ಹಡಪದ, ಭೀಮಪ್ಪ ಗದಗಿನ, ರಾಮಣ್ಣ ಹೊಸಗೇರಿ ಹಾಗೂ ರಫೀಕ ಹೊಂಬಳ ತಿಳಿಸಿದ್ದಾರೆ.

ಒಟ್ಟಾರೆ ಅಕಾಲಿಕ ಮಳೆ ಡಂಬಳ ಹೋಬಳಿಯ ರೈತರಲ್ಲಿ ಅನಿಶ್ಚಿತತೆ ಮತ್ತು ಆತಂಕವನ್ನು ಉಂಟುಮಾಡಿದೆ.

### ಶಿರಹಟ್ಟಿ ತಾಲೂಕಾಸ್ಪತ್ರೆಯಲ್ಲಿ ಅವಧಿ ಮೀರಿದ ಔಷಧಿ ಪೂರೈಕೆಗೆ ಸಾರ್ವಜನಿಕರ ಆಕ್ರೋಶ

# ಆಸ್ಪತ್ರೆಯಲ್ಲಿನ ಅವ್ಯವಸ್ಥೆ ಸರಿಪಡಿಸಿ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯ ತಾಲೂಕಾಸ್ಪತ್ರೆಯಲ್ಲಿ ಅವಧಿ ಮೀರಿದ ಔಷಧಿಗಳನ್ನು ಸಾರ್ವಜನಿಕರಿಗೆ ವಿತರಿಸುತ್ತಿದ್ದು, ಇದನ್ನು ಪ್ರಶ್ನಿಸಿದರೆ ಆಡಳಿತ ವೈದ್ಯಾಧಿಕಾರಿ ಪೊಲೀಸ್ ಠಾಣೆಗೆ ಮಾಹಿತಿ ನೀಡುತ್ತೇನೆಂದು ಹೇಳುತ್ತಿದ್ದಾರೆಂದು ಸಾರ್ವಜನಿಕರು ಸೋಮವಾರ ಬೆಳಿಗ್ಗೆ ತಾಲೂಕಾ ಆಸ್ಪತ್ರೆಯಲ್ಲಿ ತಮಗೆ ನೀಡಿದ ಅವಧಿ ಮೀರಿದ ಔಷಧಿ ಬಾಟಲ್ ಮತ್ತು ತಪಾಸಣಾ ಪುಸ್ತಕದಲ್ಲಿ ನಮೂದಾಗಿರುವದನ್ನು ಪ್ರದರ್ಶಿಸಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

ಖಾನಾಪೂರ ಗ್ರಾಮದಲ್ಲಿಯ ಆಶಾಬಿ ದೊಡ್ಡಮನಿ ಎಂಬುವರು ಮಾನಸಿಕ ಕಾಯಿಲೆ ಇದ್ದ ಬಗ್ಗೆ ತಾಲೂಕಾಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆಯುತ್ತಿದ್ದಾರೆ. ಅವಧಿ ಮೀರಿದ ಔಷಧಿ ಸೇವನೆ ಮಾಡಿರುವದರಿಂದ ನಿದ್ದೆ ಜಾಸ್ತಿ ಬರುತ್ತಿದ್ದು, ಮೈ-ಕೈ ನೋವು ಜಾಸ್ತಿಯಾಗುತ್ತಿದೆ. ಈ ಬಗ್ಗೆ ಕೇಳಿದರೆ ಇದನ್ನು ನಾವು ಪೂರೈಸಿಲ್ಲ ಎನ್ನುತ್ತಿದ್ದು, ಔಷಧಿ ವಿತರಿಸಿ ತಾವೇ ಸಹಿ ಮಾಡಿ ನೀಡಿದ್ದಾರೆಂದು ಆಶಾಬಿ ದೊಡ್ಡಮನಿ ಆರೋಪಿಸಿದರು.

ದಲಿತ ಮುಖಂಡ ಪ್ರಕಾಶ ಬಡೆಣ್ಣವರ, ಶಿಶಿರ ಪಾಟೀಲ ಮಾತನಾಡಿ, ಅವಧಿ ಮೀರಿದ ಔಷಧಿ ಪೂರೈಕೆ ಮಾಡಿದ್ದರ ಕುರಿತು ತಾಲೂಕಾಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಯನ್ನು ಪ್ರಶ್ನಿಸಿದಾಗ ಸಮರ್ಪಕ ಉತ್ತರ ನೀಡದೇ ನಾವು ಔಷಧಿಯನ್ನೇ ನೀಡಿಲ್ಲ ಎಂದು ಹೇಳುತ್ತಿದ್ದಾರೆ. ರೋಗಿಯ ಪುಸ್ತಕದಲ್ಲಿ ಔಷಧಿ ನೀಡಿ ಸಹಿಯನ್ನು ಸಹ ಮಾಡಿದ್ದಾರೆ. ಶಿರಹಟ್ಟಿ ಶಹರವೂ ಸೇರಿದಂತೆ ವಿವಿಧ ಗ್ರಾಮೀಣ ಪ್ರದೇಶಗಳಿಂದ ಇಲ್ಲಿ ನಿತ್ಯವೂ ನೂರಾರು ಸಂಖ್ಯೆಯಲ್ಲಿ ರೋಗಿಗಳು ಬಂದರೂ ಅವರಿಗೆ ಸಮರ್ಪಕ ಚಿಕಿತ್ಸೆ ಲಭಿಸುತ್ತಿಲ್ಲ. ಗರ್ಭಿಣಿಯರು, ಮಕ್ಕಳು ಸಕಾಲಕ್ಕೆ ಚಿಕಿತ್ಸೆ ಸಿಗದೇ ಬೇರೆ ಊರುಗಳಿಗೆ ತೆರಳಬೇಕಾದ ಪರಿಸ್ಥಿತಿ ಇದ್ದು, ಈ ಕೂಡಲೇ ಸಂಬಂಧಿಸಿದ ಅಧಿಕಾರಿಗಳು ಈ ಅವ್ಯವಸ್ಥೆಯನ್ನು ಸರಿಪಡಿಸಬೇಕೆಂದು ಆಗ್ರಹಿಸಿದರು.

ಈ ಕುರಿತು ತಾಲೂಕಾ ಆರೋಗ್ಯಾಧಿಕಾರಿ ಡಾ. ಸುಭಾಸ ದೈಗೊಂಡ ಮಾತನಾಡಿ, ಈ ಬಗ್ಗೆ ಜಿಲ್ಲಾ ಆರೋಗ್ಯಾಧಿಕಾರಿಗಳ ಗಮನಕ್ಕೆ ತರಲಾಗುವುದು ಎಂದರು.

> ಸಾರ್ವಜನಿಕರು ಪ್ರತಿಭಟನೆ ನಡೆಸುತ್ತಿದ್ದಂತೆಯೇ ತಾಲೂಕಾಸ್ಪತ್ರೆಯಲ್ಲಿ ಕೆಲ ಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು. ಪ್ರತಿಭಟನಾಕಾರರಿಗೆ ಮನವೊಲಿಸುವ ಪ್ರಯತ್ನವಾಗಲೀ, ಇಲ್ಲವೇ ಆರೋಪಗಳಿಗೆ ಉತ್ತರ ನೀಡಲು ಯಾರೂ ಮುಂದೆ ಬರಲಿಲ್ಲ. ಇದಕ್ಕೂ ತಮಗೆ ಸಂಬಂಧವಿಲ್ಲವೆನ್ನುವ ರೀತಿ ಕೆಲ ಸಿಬ್ಬಂದಿಗಳು ತಮ್ಮ ಪಾಡಿಗೆ ಕೆಲಸ ಮಾಡುವಲ್ಲಿ ತಲ್ಲೀನರಾಗಿರುವುದು ಕಂಡುಬಂದಿತು.
>
> ಈ ಕುರಿತು ಪ್ರತಿಕ್ರಿಯೆ ನೀಡಲು ತಾಲೂಕಾ ಆಸ್ಪತ್ರೆಯ ವೈದ್ಯಾಧಿಕಾರಿ ಗೋಪಾಲ್‌ರಾಜ್ ನಿರಾಕರಿಸಿದರು.

## ಪ್ರಕಲ್ಪ ಶಾಲೆಯಲ್ಲಿ 'ಟ್ರೆಡಿಷನಲ್ ಡೇ'

**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಪ್ರಕಲ್ಪ ಹಿರಿಯ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆಯಲ್ಲಿ 'ಟ್ರೆಡಿಷನಲ್ ಡೇ' ಆಚರಿಸಲಾಯಿತು. ಕಾರ್ಯಕ್ರಮಕ್ಕೆ ವಿದ್ಯಾರ್ಥಿಗಳು ವಿವಿಧ ರಾಜ್ಯಗಳ ಸಾಂಪ್ರದಾಯಿಕ ಉಡುಪುಗಳನ್ನು ಧರಿಸಿದ್ದು ಶಾಲಾ ಆವರಣದಲ್ಲಿ ವೈವಿಧ್ಯಮಯ ಸಂಸ್ಕೃತಿಯ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಕನ್ನಡ, ತಮಿಳು, ತೆಲುಗು, ಮರಾಠಿ ಹಾಗೂ ಉತ್ತರ ಭಾರತದ ಸಂಪ್ರದಾಯಿಕ ವೇಷಭೂಷಣಗಳಲ್ಲಿ ಕಂಗೊಳಿಸಿದ ವಿದ್ಯಾರ್ಥಿಗಳು ಎಲ್ಲರ ಗಮನ ಸೆಳೆದರು.

ಶಾಲೆಯ ಸಂಸ್ಥಾಪಕರು ಹಾಗೂ ಅಧ್ಯಕ್ಷರಾದ ಎಸ್.ವಿ. ಹುಬ್ಬಳ್ಳಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಆಧುನಿಕತೆಯ ಭರಾಟೆಯಲ್ಲಿ ಸಾಂಪ್ರದಾಯಿಕ ಉಡುಪಿನ ಸೊಬಗು ಮತ್ತೆ ನೆನಪಾಗಲಿ. ವೇಷ-ಭೂಷಣ ಬದಲಾಗಬಹುದು. ಆದರೆ, ಸಂಸ್ಕೃತಿ ಮತ್ತು ಸಂಸ್ಕಾರ ಎಂದಿಗೂ ಶಾಶ್ವತವಾಗಿರುತ್ತದೆ ಎಂದರು.

ವಿದ್ಯಾರ್ಥಿಗಳು ಪರಂಪರೆಯ ಆಚರಣೆಗಳ ಮಹತ್ವವನ್ನು ವಿವರಿಸಿ, ನಮ್ಮ ಸಂಸ್ಕೃತಿಯನ್ನು ಉಳಿಸುವ ಅಗತ್ಯತೆಯನ್ನು ಒತ್ತಿ ಹೇಳಿದರು. ಕಾರ್ಯಕ್ರಮದಲ್ಲಿ ಶಾಲೆಯ ಕಾರ್ಯದರ್ಶಿಗಳಾದ ಪಿ.ಎಸ್. ಹುಬ್ಬಳ್ಳಿ ಹಾಗೂ ಮಾರ್ಗದರ್ಶಕರಾದ ಎಸ್.ಎಸ್. ಹುಬ್ಬಳ್ಳಿ, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಡೆಸಿಕೊಟ್ಟ ಶಾಲೆಯ ಎಲ್ಲ ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನು ಎಂ.ಎಂ. ಡಂಬಳ ಅಭಿನಂದಿಸಿದರು.



'ಪುಲಿಗೆರೆ ಉತ್ಸವ'ದ 3ನೇ ದಿನದ ಕಾರ್ಯಕ್ರಮದಲ್ಲಿ ಪ್ರೇಕ್ಷಕರನ್ನು ಮಾಯಾಲೋಕಕ್ಕೆ ಕರೆದೊಯ್ದು ಕಲಾವಿದರು

## 'ಸಂಪೂರ್ಣ ರಾಮಾಯಣ'ದಲ್ಲಿ ಕಳೆದುಹೋದ ಪ್ರೇಕ್ಷಕ






> ಅಪರೂಪದ ಕಲಾ ಪ್ರತಿಭೆಯಾಗಿರುವ ವಿದುಷಿ ಗಾಯತ್ರಿ ಚಂದ್ರಶೇಖರ ಅವರ ಹಾವ-ಭಾವ, ರೌದ್ರಾವತಾರದ ಭಂಗಿ, ಯುದ್ಧದ ಸನ್ನಿವೇಶ, ಕೊನೆಗೆ ಪಟ್ಟಾಭಿಷೇಕದ ದೃಶ್ಯಗಳು ಸಂಪೂರ್ಣ ರಾಮಾಯಣದ ಚಿತ್ರಣವನ್ನು ತೆರೆದಿಟ್ಟಂತಿತ್ತು. ವಿಶೇಷವಾಗಿ ಶಬರಿಯು ರಾಮನಿಗಾಗಿ ಕಾಯುತ್ತಿರುವ ವೃದ್ಧೆಯ ಪಾತ್ರವಂತೂ ಅದ್ಭುತವಾಗಿ ಮೂಡಿಬಂದಿತು. ಸುಮಾರು ಒಂದುವರೆ ಗಂಟೆಗೂ ಅಧಿಕ ಕಾಲ ಭರತನಾಟ್ಯವನ್ನು ಪ್ರದರ್ಶಿಸಿದ ಈ ತಂಡ ಕೊನೆಗೆ ರಾಮನ ಪಟ್ಟಾಭಿಷೇಕ ನೆರವೇರಿಸಿದಾಗ ಇಡೀ ಆವರಣದಲ್ಲಿದ್ದ ಪ್ರೇಕ್ಷಕರೆಲ್ಲರೂ ಎದ್ದು ನಿಂತು ಚಪ್ಪಾಳೆ ತಟ್ಟುವ ಮೂಲಕ ಪ್ರಶಂಸೆ ವ್ಯಕ್ತಪಡಿಸಿದರು.



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇನ್ಫೋಸಿಸ್ ಪ್ರತಿಷ್ಠಾನದ ವತಿಯಿಂದ ಶ್ರೀ ಸೋಮೇಶ್ವರ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಸಹಕಾರದಲ್ಲಿ ಭಾರತೀಯ ವಿದ್ಯಾಭವನ ಆಯೋಜಿಸಿರುವ ಪುಲಿಗೆರೆ ಉತ್ಸವದ 3ನೇ ದಿನದ ಕಾರ್ಯಕ್ರಮದಲ್ಲಿ ವಿದುಷಿ ಗಾಯತ್ರಿ ಚಂದ್ರಶೇಖರ ಅವರ ನೇತೃತ್ವದ ತಂಡ ಪ್ರಸ್ತುತಪಡಿಸಿದ ಭರತನಾಟ್ಯ ಪ್ರದರ್ಶನ ಸೇರಿದ್ದ ಸಾವಿರಾರು ಜನರ ಮನಸೂರೆಗೊಳ್ಳುವಲ್ಲಿ ಯಶಸ್ವಿಯಾಯಿತು.

ಅದ್ಭುತ ಪ್ರತಿಭೆಯನ್ನು ಪ್ರದರ್ಶಿಸಿದ ಈ ತಂಡದ ಕಲಾವಿದೆಯರು ಸಂಪೂರ್ಣ ರಾಮಾಯಣದ ಸನ್ನಿವೇಶಗಳನ್ನೇ ಪ್ರೇಕ್ಷಕರ ಕಣ್ತುಂಬಿಸಿದರು. ರಾಮ, ಸೀತೆ, ಲಕ್ಷ್ಮಣ, ರಾವಣ, ವಿಭೀಷಣ, ಶಬರಿ, ಜಟಾಯು, ಹನುಮಂತ ಇತ್ಯಾದಿ ಪಾತ್ರಗಳನ್ನು ಸೀತಾಪಹರಣ, ಶ್ರೀರಾಮಪಟ್ಟಾಭಿಷೇಕದಂತಹ ಪ್ರಸಂಗಗಳನ್ನು ಪರಕಾಯ ಪ್ರವೇಶ ಮಾಡಿದವರಂತೆ ಲೀಲಾಜಾಲವಾಗಿ ಅಭಿನಯಿಸಿದ್ದು ಪ್ರೇಕ್ಷಕರ ಆಕರ್ಷಣೆಗೆ ಕಾರಣವಾಗಿತ್ತು.

ನಂತರ ಬೆಂಗಳೂರಿನ ವಿದುಷಿ ಲತಾ ಲಕ್ಷ್ಮೀಶ್ ಮತ್ತು ತಂಡದವರು ಪ್ರಸ್ತುತಪಡಿಸಿದ ಭರತನಾಟ್ಯ ನೃತ್ಯ ವೈವಿಧ್ಯ ಗಮನ ಸೆಳೆಯುವಂತಿತ್ತು. ಈ ತಂಡದ ಕಲಾವಿದರು ಪುಷ್ಪಾಂಜಲಿ ನೃತ್ಯವನ್ನು ಪ್ರಸ್ತುತಪಡಿಸುವ ಮೂಲಕ ನೃತ್ಯ ಪ್ರದರ್ಶನವನ್ನು ಪ್ರಾರಂಭಿಸಿದರು. ಪ್ರಥಮ ಪೂಜಿತ ವಿಘ್ನನಿವಾರಕ ಗಣೇಶ ಪಂಚರತ್ನ, ಶುದ್ಧ ನೃತ್ಯ ಬಂಧವಾಗಿರುವ ಜತಿಸ್ವರದಲ್ಲಿ ಪ್ರಸ್ತುತಪಡಿಸಿದರು. ಅರ್ಧನಾರೀಶ್ವರನ ನೃತ್ಯ ವೈಭವ ಎಲ್ಲರ ಗಮನ ಸೆಳೆಯಿತು. ನಂತರದಲ್ಲಿ ಅಭಂಗಗಳು, ತರುವಾಯ ಮಹಿಷ ಮರ್ದಿನಿ ನೃತ್ಯ ರೂಪಕ ಅತ್ಯಂತ ಸುಂದರವಾಗಿ ಮೂಡಿ ಬಂದಿತು. ನಿರಂತರವಾಗಿ ನೃತ್ಯ ಪ್ರದರ್ಶಿಸಿದ ಈ ಕಲಾವಿದೆಯರು ಪ್ರೇಕ್ಷಕರ ಕರತಾಡನದಿಂದ ಪುಲಕಿತರಾದರು.

ತಂಡದ ಸದಸ್ಯರಾದ ಲಾಸ್ಯ, ಅಂಜನಾ, ಗೌತಮಿ, ತೇಜಸ್ವಿನಿ, ಪೂಜಿತಾ, ಸುಖದಾ ಭಟ್, ರಿಶಿತಾ, ತನ್ಮಯಿ, ಯಶಸ್ವಿನಿ ಅವರ ನೃತ್ಯಗಳು ಎಲ್ಲರ ಮೆಚ್ಚುಗೆ ಗಳಿಸಿದವು. ನಂತರ 3 ದಿನಗಳ ಸಂಗೀತ, ನೃತ್ಯ, ಚಿತ್ರ ಸಂಭ್ರಮಗಳ ಪುಲಿಗೆರೆ ಉತ್ಸವದ ವೈಭವಕ್ಕೆ ಸಹಕರಿಸಿದ ಹಿರಿಯರನ್ನು ಭಾರತೀಯ ವಿದ್ಯಾಭವನದ ವತಿಯಿಂದ ಅಭಿನಂದಿಸಲಾಯಿತು.

ದಾರಿದೀಪ ಮಹಿಳಾ ವಿವಿದೋದ್ದೇಶಗಳ ಸಂಸ್ಥೆ ಉದ್ಘಾಟನೆ

## ಮಹಿಳೆಯರ ಸ್ವಾವಲಂಬನೆಗೆ ಹೊಸ ದಿಕ್ಕು: ಶಕುಂತಲಾ ಮುಳಗುಂದ



> "ದಾರಿದೀಪ ವಿವಿದೋದ್ದೇಶಗಳ ಸಂಸ್ಥೆಯ ಹೆಸರೇ ವಿಶೇಷ. ಎಲ್ಲರನ್ನೂ ಒಗ್ಗೂಡಿಸುವ ಉದ್ದೇಶ ಸ್ಪಷ್ಟವಾಗುತ್ತದೆ. ಸೇವಾ ಮನೋಭಾವದಿಂದ ಪರಸ್ಪರ ಸಹಕಾರ ಹೊಂದಿದರೆ ಸಂಸ್ಥೆ ಉನ್ನತ ಮಟ್ಟಕ್ಕೆ ಬೆಳೆಯಲು ಸಾಧ್ಯ."
> **– ಜಗದೀಶ್ ಎಸ್. ಪಿ., ಸಂಸ್ಥಾಪಕ ಅಧ್ಯಕ್ಷರು, ಆರ್.ಕೆ ಗ್ರೂಪ್ಸ್**

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಕುಮಾರವ್ಯಾಸ ಸಂಕೀರ್ಣದ ಹತ್ತಿರದ ಚೇತನ ಕಾಂಪ್ಲೆಕ್ಸ್‌ನಲ್ಲಿರುವ ದಿ. ಕಾರ್ಪೊರೇಶನ್ ಕ್ರೆಡಿಟ್ ಸೌಹಾರ್ದ ಸಹಕಾರಿ ಸಂಘದ ಕಾರ್ಯಾಲಯದಲ್ಲಿ ಸೋಮವಾರ ದಾರಿದೀಪ ಮಹಿಳಾ ವಿವಿದೋದ್ದೇಶಗಳ ಸಂಸ್ಥೆಯ ಉದ್ಘಾಟನಾ ಕಾರ್ಯಕ್ರಮ ಸಡಗರದಿಂದ ನಡೆಯಿತು. ಪ್ರೊ. ಬಿ. ಬಿ. ಗೌಡರ ಅವರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಸಂಸ್ಥೆಯ ಅಧ್ಯಕ್ಷೆ ಶಕುಂತಲಾ ಮುಳಗುಂದ ಮಾತನಾಡಿ, "ಎಂಟು ವರ್ಷದ ಕನಸು ಇಂದು ನನಸಾಗಿದೆ. ಸಂಸ್ಥೆಯ ಎಲ್ಲ ಸದಸ್ಯರ ಸಹಕಾರದಿಂದ ಈ ದಿನ ಕಂಡಿದ್ದೇವೆ. ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಇದು ಮಹತ್ವದ ವೇದಿಕೆ. ತಮ್ಮ ಆಚಾರ-ವಿಚಾರಗಳನ್ನು ಸಮಾಜದೊಂದಿಗೆ ಹಂಚಿಕೊಳ್ಳುವ ಅವಕಾಶವಾಗಿದೆ. ಮನೆಯ ಹಿರಿಯರನ್ನು ಮನವೊಲಿಸಿ ಹೊರಬಂದು ಮಹಿಳೆಯರು ಸಾಧನೆಗೈಯಬೇಕು. ಒಗ್ಗಟ್ಟಿನಿಂದ ನಡೆದರೆ ಏನನ್ನಾದರೂ ಸಾಧಿಸಬಹುದು ಎಂಬುದನ್ನು ಸಮಾಜಕ್ಕೆ ತೋರಿಸಬೇಕಾಗಿದೆ," ಎಂದು ಹೇಳಿದರು.

ಉದ್ಘಾಟನೆ ನೆರವೇರಿಸಿದ ಪ್ರೊ. ಬಿ. ಬಿ. ಗೌಡರ ಮಾತನಾಡಿ, "ಶಕುಂತಲಾ ಹಾಗೂ ಜ್ಯೋತಿ ನನ್ನ ವಿದ್ಯಾರ್ಥಿನಿಯರು. ನಾನು ಬೆಳೆಸಿದ ಮರ ಇಂದು ಹೆಮ್ಮರವಾಗಿ ಬೆಳೆಯುತ್ತಿರುವುದು ಸಂತಸ ತಂದಿದೆ. ಸಹಕಾರವಿಲ್ಲದೆ ಸಾಧನೆ ಅಸಾಧ್ಯ. ಸಮಾನ ಮನಸ್ಕರು ಒಂದಾಗಿ ಕೆಲಸ ಮಾಡಿದಾಗ ದಾರಿ ಸುಗಮವಾಗುತ್ತದೆ," ಎಂದು ಅಭಿಪ್ರಾಯಪಟ್ಟರು.

ಪ್ರಾಸ್ತಾವಿಕವಾಗಿ ದೀಪಾ ಹನುಮಂತಗೌಡ್ರ ಮಾತನಾಡಿ, "ಹಿಂದೆ ಮಹಿಳೆಯರಿಗೆ ಸಮಾಜಮುಖಿ ಕಾರ್ಯಗಳಲ್ಲಿ ಅವಕಾಶ ಕಡಿಮೆ ಇತ್ತು. 1980ರ ದಶಕದ ಬಳಿಕ ಮಹಿಳಾ ಸಂಘಟನೆಗಳ ಮೂಲಕ ಸ್ವಾವಲಂಬನೆಗೆ ನಾಂದಿ ಹಾಡಲಾಯಿತು. ಗ್ರಾಮೀಣ ಪ್ರದೇಶಗಳಲ್ಲಿ ಸಾಲ ವಿತರಣೆ ಮೂಲಕ ಮಹಿಳಾ ಸಬಲೀಕರಣಕ್ಕೆ ಚಾಲನೆ ನೀಡಲಾಯಿತು. ಅದೇ ಹಾದಿಯಲ್ಲಿ ನಗರದಲ್ಲಿ ದಾರಿದೀಪ ಸಂಸ್ಥೆ ಸ್ಥಾಪನೆಯಾಗಿದೆ. ಮಹಿಳೆಯರು ಇದರ ಸದುಪಯೋಗ ಪಡೆದುಕೊಳ್ಳಬೇಕು," ಎಂದು ಕರೆ ನೀಡಿದರು.

ಕಾರ್ಯಕ್ರಮವನ್ನು ಜ್ಯೋತಿ ದೇಸಾಯಿಗೌಡ್ರ ನಿರೂಪಿಸಿದರು. ಸುಪ್ರಿಯಾ ಐಯನಗೌಡ್ರ ಆಡಳಿತ ಮಂಡಳಿ ಸದಸ್ಯರಿಗೆ ಬ್ಯಾಚ್ ವಿತರಿಸಿದರು. ದೀಪಾ ಹನುಮಂತಗೌಡ್ರ ಸಂಸ್ಥೆಯ ಸದಸ್ಯರಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ವಿಜಯಲಕ್ಷ್ಮೀ ಅಸೂಟಿ ಸ್ವಾಗತಿಸಿದರು. ರಾಜೇಶ್ವರಿ ಕುಲಕರ್ಣಿ ವಂದಿಸಿದರು.

ಈ ಸಂದರ್ಭದಲ್ಲಿ ಶಾಂತಾ ಹಿರೇಮಠ, ಪ್ರಶಾಂತ್, ಮಂಜುನಾಥ ಮುಳಗುಂದ ಹಾಗೂ ಸಂಸ್ಥೆಯ ಸದಸ್ಯರಾದ ಶಶಿಕಲಾ ಮ. ಗಾವಡಿ, ರಮ್ಯಾ ನಾ. ಗಾವಡಿ, ದೀಪಾ ಬಿ. ಬೆಳವಡಿ, ಶಾರದಾ ಆ. ವಣಗೇರಿ, ದೀಪಾ ಶ. ಉಗಲಾಟ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಶ್ರೀ ಕಲ್ಲೇಶ್ವರ ದೇವಸ್ಥಾನ ರಥೋತ್ಸವ ವಿಜೃಂಭಣೆ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಹಳೆಯ ಊರಿನ ಐತಿಹಾಸಿಕ ಶ್ರೀ ಕಲ್ಲೇಶ್ವರ ದೇವಸ್ಥಾನದಲ್ಲಿ ನಡೆದ ರಥೋತ್ಸವ ಭಕ್ತಿ-ಭಾವನೆಯಲ್ಲಿ ಮಿಂದೇಳಿತು. ಬೆಳಗಿನ ಜಾವದಿಂದಲೇ ದೇವಸ್ಥಾನದಲ್ಲಿ ವಿಶೇಷ ಪೂಜೆ, ಹೋಮ-ಹವನಗಳು ಶಾಸ್ತ್ರೋಕ್ತವಾಗಿ ನೆರವೇರಿದವು. ಹಣ್ಣು-ಕಾಯಿ ಸಮೇತ ಆಗಮಿಸಿದ ಭಕ್ತರು ಸಾಲುಗಟ್ಟಿ ನಿಂತು ದೇವರ ದರ್ಶನ ಪಡೆದರು.

ಸಂಜೆ 5:30ಕ್ಕೆ ರಥ ಬೀದಿಯಲ್ಲಿ ಅಲಂಕೃತ ಪಲ್ಲಕ್ಕಿಯಲ್ಲಿ ಉತ್ಸವ ಮೂರ್ತಿಯನ್ನು ಭವ್ಯ ಮೆರವಣಿಗೆಯಲ್ಲಿ ಕೊಂಡೊಯ್ಯಲಾಯಿತು. ನಂದಿಕೋಲು ಹಾಗೂ ಸಮಾಳ ವಾದ್ಯಗಳ ಘೋಷಗಳ ನಡುವೆ ಕಲ್ಲೇಶ್ವರ ಮೂರ್ತಿಗೆ ರಥದ ಸುತ್ತ ಮೂರು ಪ್ರದಕ್ಷಿಣೆ ಹಾಕಿಸಲಾಯಿತು. "ಹರ ಹರ ಮಹಾದೇವ" ಎಂಬ ಘೋಷಣೆಗಳಿಂದ ಊರು ಮೊಳಗಿತು.

ಪಟ್ಟಣದ ಹೆಚ್.ಎಂ. ಗಂಗಾಧರ ಅವರು 11,001 ಮೊತ್ತ ಕೂಗುವ ಮೂಲಕ ಪಟಾಕ್ಷಿಯನ್ನು ತಮ್ಮದಾಗಿಸಿಕೊಂಡರು. ರಥ ಮುಂದಕ್ಕೆ ಚಲಿಸಲಾರಂಭಿಸುತ್ತಿದ್ದಂತೆ ನೂರಾರು ಭಕ್ತರು ಬಾಳೆಹಣ್ಣು ಎಸೆದು ಭಕ್ತಿಭಾವ ಸಮರ್ಪಿಸಿದರು. ಹಳೇ ಹಗರಿಬೊಮ್ಮನಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಗುರುಹಿರಿಯರು, ಮಹಿಳೆಯರು ಹಾಗೂ ಯುವಕರು ಉತ್ಸವದಲ್ಲಿ ಭಾಗವಹಿಸಿ ಧಾರ್ಮಿಕ ಏಕತೆಯನ್ನು ವ್ಯಕ್ತಪಡಿಸಿದರು.

ರಥೋತ್ಸವವು ಭಕ್ತಿ, ಸಂಪ್ರದಾಯ ಮತ್ತು ಸಂಭ್ರಮಗಳ ಸಮನ್ವಯವಾಗಿ ಯಶಸ್ವಿಯಾಗಿ ಜರುಗಿತು.

## ಕೃಷಿ ಭೂಮಿಯಲ್ಲಿ ವಿಂಡ್ ಪವರ್ ಯೋಜನೆಗೆ ರೈತರ ತೀವ್ರ ವಿರೋಧ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಕೃಷಿ ಭೂಮಿಯಲ್ಲಿ ಪವನ ವಿದ್ಯುತ್ (ವಿಂಡ್ ಪವರ್) ಯೋಜನೆ ಸ್ಥಾಪನೆಗೆ ರೈತರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

"ಕೃಷಿ ಭೂಮಿಯಾಗಿ ನಾವು" ಸಂಘಟನೆಯ ನೇತೃತ್ವದಲ್ಲಿ ರೈತರು ಪಟ್ಟಣದ ಆಡಳಿತ ಸೌಧದ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಸಂಘಟನೆಯ ಸಂಚಾಲಕ ಬುಡ್ಡಿ ಬಸವರಾಜ್, ಕೆಲವು ಖಾಸಗಿ ಕಂಪನಿಗಳು ಕೃಷಿಗೆ ಯೋಗ್ಯವಾದ ಭೂಮಿಯಲ್ಲಿ ಪವನ ವಿದ್ಯುತ್ ಯಂತ್ರಗಳನ್ನು ಅಳವಡಿಸಲು ಮುಂದಾಗಿರುವುದಾಗಿ ಆರೋಪಿಸಿದರು. "ಇಲ್ಲಿನ ರೈತರು ಸಂಪೂರ್ಣವಾಗಿ ಕೃಷಿಯನ್ನು ಅವಲಂಬಿಸಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಇಂತಹ ವಿಂಡ್ ಪವರ್ ಘಟಕಗಳಿಂದ ಭೂಮಿಯ ತೇವಾಂಶ ಕುಂಠಿತವಾಗುವ ಸಾಧ್ಯತೆ ಇದೆ. ಇದರಿಂದ ಬೆಳೆ ಉತ್ಪಾದನೆ ಮೇಲೆ ಗಂಭೀರ ಪರಿಣಾಮ ಬೀರುವ ಭೀತಿ ಇದೆ," ಎಂದು ಆತಂಕ ವ್ಯಕ್ತಪಡಿಸಿದರು.

ಇದೇ ವೇಳೆ, ಇತರೆ ತಾಲೂಕುಗಳಲ್ಲಿ ಇಂತಹ ಯೋಜನೆಗಳಿಂದ ರೈತರು ಸಂಕಷ್ಟ ಅನುಭವಿಸಿರುವ ಉದಾಹರಣೆಗಳನ್ನು ಉಲ್ಲೇಖಿಸಿದ ಅವರು, "ಈ ಯೋಜನೆ ರೈತರಷ್ಟೇ ಅಲ್ಲದೆ ಪ್ರಾಣಿ-ಪಕ್ಷಿಗಳು ಹಾಗೂ ಪರಿಸರಕ್ಕೂ ಹಾನಿಕಾರಕವಾಗಬಹುದು. ನಿಯಮಾನುಸಾರ ಪವನ ವಿದ್ಯುತ್ ಘಟಕಗಳನ್ನು ಗುಡ್ಡಗಾಡು ಪ್ರದೇಶಗಳಲ್ಲಿ ಅಥವಾ ಕೃಷಿಗೆ ಯೋಗ್ಯವಲ್ಲದ ಭೂಮಿಯಲ್ಲಿ ಅಳವಡಿಕೆ ಮಾಡಬೇಕು. ಆದ್ದರಿಂದ ತಾಲೂಕಿನ ಸಸ್ಯಶ್ಯಾಮಲ ಕೃಷಿಭೂಮಿಯಲ್ಲಿ ಈ ಯೋಜನೆಗೆ ಅವಕಾಶ ನೀಡಬಾರದು," ಎಂದು ಆಗ್ರಹಿಸಿದರು.

ಮುಖಂಡರಾದ ಕಡಲಬಾಳು ವೆಂಕಟೇಶ್ ಮನವಿ ಪತ್ರವನ್ನು ತಹಶೀಲ್ದಾರ್ ಅವರಿಗೆ ಸಲ್ಲಿಸಿದರು.

ಪ್ರತಿಭಟನೆಯಲ್ಲಿ ಮುಟಗನಹಳ್ಳಿ ಕೊಟ್ರೇಶ್, ಕೋಡಿಹಳ್ಳಿ ಮಂಜುನಾಥ್, ಪೂಜಾರ್ ಸಿದ್ದಪ್ಪ, ಎಂ. ಶಿವರಾಜ್, ಲಿಂಗರಾಜ್ ಯಾದವ್, ಚೀಲಗೋಡ ಭೀಮಪ್ಪ, ಹೆಚ್. ದುರುಗಪ್ಪ, ರಮೇಶ್, ಸಂತೋಷ್, ಸೋಮನಾಥ ಭಜಂತ್ರಿ, ಗೋಣೆಪ್ಪ, ಹನುಮಂತ, ಚಂದ್ರು ಸೇರಿದಂತೆ ಹಲವಾರು ರೈತರು ಉಪಸ್ಥಿತರಿದ್ದರು.



## ಶಾಲೆಯಲ್ಲಿ ಆಕಸ್ಮಿಕ ಬೆಂಕಿ-ಶಿಕ್ಷಣೋಪಕರಣಗಳು ಬೆಂಕಿಗೆ ಆಹುತಿ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಹಳೆ ಹಗರಿಬೊಮ್ಮನಹಳ್ಳಿ ಪಟ್ಟಣದಲ್ಲಿರುವ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ಒಂದು ಕೊಠಡಿಗೆ ಸೋಮವಾರ ಬೆಳಿಗ್ಗೆ ಸುಮಾರು 8ರಿಂದ 9 ಗಂಟೆಯ ನಡುವೆ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡ ಘಟನೆ ನಡೆದಿದೆ. ಸಕಾಲದಲ್ಲಿ ಸ್ಥಳೀಯರ ಹಾಗೂ ಶಾಲಾ ಸಿಬ್ಬಂದಿಯ ಚುರುಕಿನ ಕಾರ್ಯಾಚರಣೆಯಿಂದ ಬೆಂಕಿಯನ್ನು ನಿಯಂತ್ರಣಕ್ಕೆ ತರಲಾಗಿದ್ದು, ಹೆಚ್ಚಿನ ಹಾನಿ ಸಂಭವಿಸಿಲ್ಲ.

ಘಟನೆಯಲ್ಲಿ ಶಾಲಾ ಕೊಠಡಿಯಲ್ಲಿದ್ದ ನೂರಾರು ಪಠ್ಯಪುಸ್ತಕಗಳು, ಕಂಪ್ಯೂಟರ್ ಮಾನಿಟರ್‌ಗಳು, ಬೋಧನಾ ಪ್ರೊಜೆಕ್ಟರ್ ಹಾಗೂ ಡೆಸ್ಕ್‌ಗಳು ಸೇರಿದಂತೆ ಹಲವು ಶಿಕ್ಷಣೋಪಕರಣಗಳು ಬೆಂಕಿಗೆ ಆಹುತಿಯಾಗಿವೆ. ಅಗ್ನಿಯಿಂದ ಕೊಠಡಿಯ ಒಳಭಾಗ ಬಹುತೇಕ ಕರಕಲಾಗಿದ್ದು, ಶಾಲೆಗೆ ಲಕ್ಷಾಂತರ ರೂಪಾಯಿ ನಷ್ಟ ಉಂಟಾಗಿದೆ ಎನ್ನಲಾಗಿದೆ.

ಕ್ಷೇತ್ರ ಶಿಕ್ಷಣಾಧಿಕಾರಿ ಪ್ರಭಾಕರ್ ಅವರು ಘಟನೆ ಕುರಿತು ಮಾತನಾಡಿ, "ಕೆಲವು ಗಿಡಿಗೇಡಿಗಳು ಕಿಟಕಿಯಿಂದ ಬೆಂಕಿ ಹಚ್ಚುವ ರೀತಿಯ ವಸ್ತು ಎಸೆದಿರುವ ಸಾಧ್ಯತೆ ಇದೆ. ಇದರಿಂದ ಕೊಠಡಿಯಲ್ಲಿ ಇದ್ದ ಪುಸ್ತಕಗಳು, ಕಂಪ್ಯೂಟರ್ ಮಾನಿಟರ್‌ಗಳು, ಬೋಧನಾ ಪ್ರೊಜೆಕ್ಟರ್‌ಗಳು ಹಾಗೂ ಡೆಸ್ಕ್‌ಗಳು ಸುಟ್ಟು ಕರಕಲಾಗಿವೆ. ಪ್ರಾಥಮಿಕ ಅಂದಾಜು ಪ್ರಕಾರ ಸುಮಾರು ಒಂದು ಲಕ್ಷ ರೂಪಾಯಿ ಮೌಲ್ಯದ ನಷ್ಟವಾಗಿದೆ," ಎಂದು ತಿಳಿಸಿದರು. ಅವರ ಸೂಚನೆ ಮೇರೆಗೆ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕರಾದ ವೀರನಗೌಡ ಅವರು ಪಟ್ಟಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪಿಎಸ್‌ಐ ಬಸವರಾಜ್ ಅಡಿವಿಬಾವಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿ ತನಿಖೆ ಮುಂದುವರಿಸಿದ್ದಾರೆ.

ಈ ಶಾಲೆ ಊರ ಮಧ್ಯಭಾಗದಲ್ಲಿರುವ ಜನಸಂಚಾರ ಹೆಚ್ಚಿರುವ ಪ್ರದೇಶದಲ್ಲಿದೆ. ಶಾಲೆಯ ಸುತ್ತಮುತ್ತ ಸದಾ ಜನರು ಓಡಾಡುತ್ತಿರುವ ಪರಿಸ್ಥಿತಿಯಲ್ಲಿಯೇ ಇಂತಹ ಘಟನೆ ಸಂಭವಿಸಿರುವುದು ಸಾರ್ವಜನಿಕರಲ್ಲಿ ಕುತೂಹಲ ಹಾಗೂ ಅನುಮಾನಕ್ಕೆ ಕಾರಣವಾಗಿದೆ. ದುಷ್ಕೃತ್ಯವೋ ಅಥವಾ ಬೇರೆ ಕಾರಣವೋ ಎಂಬುದನ್ನು ಪೊಲೀಸರು ಪರಿಶೀಲಿಸುತ್ತಿದ್ದಾರೆ. ಘಟನೆ ತಿಳಿದ ಕೂಡಲೇ ಪುರಸಭೆ ಅಧ್ಯಕ್ಷ ಮರಿ ರಾಮಪ್ಪ, ಬಿಇಓ ಪ್ರಭಾಕರ್, ಪುರಸಭೆ ಸದಸ್ಯ ದೀಪಕ್ ಎಸ್. ಕಠಾರೆ, ಊರಿನ ಪ್ರಮುಖರಾದ ಇ.ಕೆ. ಕೃಷ್ಣಮೂರ್ತಿ, ರವೀಂದ್ರಗೌಡ, ಸುನಿಲ್, ವಿನಯ್, ಕುಮಾರ್ ಸೇರಿದಂತೆ ಹಿರಿಯ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಶಾಲೆಯ ಆಸ್ತಿಗೆ ಹಾನಿ ಉಂಟು ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.



**ಶಾಸಕ ಡಾ. ಚಂದ್ರು ಲಮಾಣಿ ಲೋಕಾಯುಕ್ತ ಕಸ್ಟಡಿಗೆ | ಆಕ್ರೋಶ ವ್ಯಕ್ತಪಡಿಸಿದ ಕಾರ್ಯಕರ್ತರು**

# ದಲಿತ ಮುಖಂಡರನ್ನು ತುಳಿಯುವ ಕಾರ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಶನಿವಾರ ಮಧ್ಯರಾತ್ರಿ ಲೊಕಾಯುಕ್ತ ಪೊಲೀಸರು ವಶಕ್ಕೆ ಪಡೆದು ಕರೆದುಕೊಂಡು ಹೋಗಿದ್ದರಿಂದ ಬಹುತೇಕ ಕಾರ್ಯಕರ್ತರಲ್ಲಿ ಅಸಮಾಧಾನ ಮಡುಗಟ್ಟಿದೆ.

ಪ್ರತಿನಿತ್ಯ ನೂರಾರು ಜನ ಕಾರ್ಯಕರ್ತರು ಮನೆ ಬಳಿ ಬರುತ್ತಿದ್ದರು. ಅನೇಕ ಕೆಲಸ ಕಾರ್ಯಗಳ ಬೇಡಿಕೆಯನ್ನು ಹೊತ್ತು ತರುವ ಸಾರ್ವಜನಿಕರು, ಅಭಿಮಾನಿಗಳು, ಪಕ್ಷದ ಕಾರ್ಯಕರ್ತರು ಮನೆ ಮುಂದೆ ತುಂಬಿರುತ್ತಿದ್ದರು. ಆದರೆ ರವಿವಾರ ಮನೆಯ ಸುತ್ತಲೂ ಖಾಲಿ ಖಾಲಿ ಆಗಿದೆ. ಮನೆಯ ಕೆಲಸಗಾರರನ್ನು ಹೊರತುಪಡಿಸಿ ಕುಟುಂಬಸ್ಥರು ಬೇರೆಕಡೆ ಸ್ಥಳಾಂತರವಾಗಿದ್ದಾರೆ. ಘಟನೆಯ ಹಿನ್ನೆಲೆಯಲ್ಲಿ ಶನಿವಾರದಿಂದಲೇ ಶಾಸಕರ ಪತ್ನಿ ಸರೋಜಾ ಮಾನಸಿಕ ಖಿನ್ನತೆಗೆ ಒಳಗಾಗಿ ಊಟವಿಲ್ಲದೆ, ಅಸ್ವಸ್ಥರಾಗಿದ್ದಾರೆ ಎನ್ನಲಾಗಿದೆ.

ಶಾಸಕ ಚಂದ್ರು ಲಮಾಣಿ ಎಂದಿನಂತೆ ನಿಗದಿತ ಕಾರ್ಯಕ್ರಮಗಳ ಪ್ರಕಾರ ಶನಿವಾರ ಮುಂಜಾನೆ 7.30ರಿಂದಲೇ ಸೋಮೇಶ್ವರ ದೇವಸ್ಥಾನದಲ್ಲಿ ನಡೆದಿರುವ ಪುಲಿಗೆರೆ ಉತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಅಲ್ಲಿ ಸುಮಾರು 1 ಗಂಟೆಗಳ ಕಾಲ ಸಂಗೀತ ಕಾರ್ಯಕ್ರಮ ಆಲಿಸಿದ ಅವರು ನಂತರ ಮನೆಗೆ ತೆರಳಿ 10 ಗಂಟೆಯ ಹೊತ್ತಿಗೆ ದೇವಸ್ಥಾನಕ್ಕೆ ಮರಳಿ ಬಂದು ಪುಲಿಗೆರೆ ಉತ್ಸವದ ನಿಮಿತ್ತ ನಡೆದ ಸೋಮೇಶ್ವರ ಪಲ್ಲಕ್ಕಿ ಉತ್ಸವ ಮೆರವಣಿಗೆಯಲ್ಲಿ ಪಾಲ್ಗೊಂಡು ಸ್ವತಃ ಪಲ್ಲಕ್ಕಿಯನ್ನು ಹೊತ್ತು ಸೇವೆ ಸಲ್ಲಿಸಿದ್ದರು. ನಂತರ ಅಲ್ಲಿಂದ ತೆರಳಿದ ಅವರು ಆಸ್ಪತ್ರೆಯಲ್ಲಿ ವಿ.ಜಿ. ರಾಮ್‌ಜಿ ಉದ್ಯೋಗ ಖಾತ್ರಿ ಯೋಜನೆಯ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಕಾರ್ಯಕರ್ತರ ಸಭೆಯನ್ನು ನಡೆಸಿದ್ದರು.

ಸಚಿವ ಎಚ್.ಕೆ. ಪಾಟೀಲರೇ ಇದಕ್ಕೆ ಕಾರಣ, ಅವರಿಂದಲೇ ಈ ಹೇಯ ಕೃತ್ಯ ನಡೆದಿದೆ, ಕಾನೂನು ಸಚಿವರಿಂದಲೇ ಕಾನೂನು ಉಲ್ಲಂಘನೆಯಾಗುತ್ತಿದೆ, ಅಧಿಕಾರವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ ಎಂದು ಜೋರಾಗಿ ಕೂಗುತ್ತಿದ್ದರು. ಇದು ಬಂಜಾರ ಸಮಾಜದ ಯುವ ಮುಖಂಡ ಬೆಳೆಯುತ್ತಿರುವದನ್ನು ಸಹಿಸಲಾಗದವರ ಕಾರ್ಯ ಎಂದು ಅಕ್ರೋಶದಿಂದ ಕೂಗಿದರು. ಮದ್ಯರಾತ್ರಿ ಶಾಸಕರನ್ನು ಹೊರಕ್ಕೆ ಕರೆತರುತ್ತಿದ್ದಂತೆ ಕಾರ್ಯಕರ್ತರ ಅಕ್ರೋಶ ಮುಗಿಲುಮುಟ್ಟಿತ್ತು. ಪೊಲೀಸ್ ಅಧಿಕಾರಿಗಳು, ನೂರಾರು ಪೋಲಿಸ್ ಸಿಬ್ಬಂದಿಗಳು ಪರಿಸ್ಥಿತಿ ನಿಭಾಯಿಸಿದರು.

ಶನಿವಾರ ಮದ್ಯಾಹ್ನ 1.30ರಿಂದ 2 ಗಂಟೆಯ ಸುಮಾರಿಗೆ ಆಸ್ಪತ್ರೆಯಲ್ಲಿದ್ದಾಗಲೇ ಲೋಕಾಯುಕ್ತ ದಾಳಿ ನಡೆದಿದ್ದು, ಏಕಾಏಕಿ ನಡೆದ ದಾಳಿಯಿಂದ



ಅವರು ಆಪ್ತ ಕಾರ್ಯದರ್ಶಿಗಳಾದ ಮಂಜುನಾಥ ವಾಲ್ಮೀಕಿ ಮತ್ತು ಗುರು ಅವರು ಸಹ ಈ ಘಟನೆಯಲ್ಲಿ ಸಿಲುಕಿಕೊಂಡಿದ್ದಾರೆ.

ಅಲ್ಲಿಂದ ಪ್ರಾರಂಭವಾದ ಲೋಕಾಯುಕ್ತ ತನಿಖೆ ಸುಮಾರು 12 ಗಂಟೆಗಳ ಕಾಲ, ಮಧ್ಯರಾತ್ರಿ 2 ಗಂಟೆಯವರೆಗೂ ನಡೆದು ಅಲ್ಲಿಂದ ಶಾಸಕ ಡಾ. ಚಂದ್ರು ಲಮಾಣಿಯವರನ್ನು ಲೋಕಾಯುಕ್ತ ಪೊಲೀಸರು ವಶಕ್ಕೆ ಪಡೆದು ಗದುಗಿಗೆ ತೆರಳಿದರು.

ಶನಿವಾರ ಮಧ್ಯಾಹ್ನ ಶಾಸಕರ ಮೇಲೆ ಲೋಕಾಯುಕ್ತ ದಾಳಿ ನಡೆದ ಸುದ್ದಿ ಹರಡುತ್ತಿದ್ದಂತೆ ಸುದ್ದಿ ತಿಳಿದ ಬಿಜೆಪಿಯ ನೂರಾರು ಕಾರ್ಯಕರ್ತರು, ಮುಖಂಡರು ಜಮಾಯಿಸಿ ಶಾಸಕರ ಮೇಲೆ ಷಡ್ಯಂತ್ರದಿಂದ ಅವರನ್ನು ಸಿಲುಕಿಸುವ ಕಾರ್ಯವನ್ನು ಮಾಡಲಾಗಿದೆ, ದಲಿತ ಮುಖಂಡರನ್ನು ತುಳಿಯುವ ಕಾರ್ಯ ಇದಾಗಿದೆ, ಶಾಸಕರು ಅಮಾಯಕರು ಎಂದು ಆಕ್ರೋಶ ಹೊರಹಾಕಿದರು.

## ಕಳಸಾಪುರ ಶಾಖಾ ಮಠದಲ್ಲಿ ರಾಯರ ವರ್ಧಂತ್ಯುತ್ಸವ




■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಕಳಸಾಪುರ ರಸ್ತೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಶಾಖಾ ಮಠದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳ 431ನೇ ವರ್ಧಂತ್ಯುತ್ಸವದ ಪ್ರಯುಕ್ತ ರಥೋತ್ಸವದ ಕಾರ್ಯಕ್ರಮ ಫೆ. 24ರಂದು ವಿಜೃಂಭಣೆಯಿಂದ ನಡೆಯಲಿದೆ. ಮುಂಜಾನೆ ಬೃಂದಾವನದಲ್ಲಿ ಸಕಲಾಭೀಷ್ಟಗಳ ಸಿದ್ಧಿಗಾಗಿ ಮಹಾ ಪಂಚಾಮೃತ ಅಭಿಷೇಕ, ಶ್ರೀ ರಾಘವೇಂದ್ರ ಸ್ವಾಮಿ ಅಷ್ಟಾಕ್ಷರ ಹೋಮ, ಸುಮಂಗಲಿಯರಿಂದ ರಾಯರ ಭಜನೆ ನೆರವೇರಲಿದೆ. ಈ ಎಲ್ಲಾ ಕಾರ್ಯಕ್ರಮಗಳಲ್ಲಿ ರಾಯರ ಭಕ್ತರು ಆಗಮಿಸಿ ರಾಘವೇಂದ್ರ ಸ್ವಾಮಿಗಳ ಆಶೀರ್ವಾದ, ಮಂತ್ರಾಕ್ಷತೆ ಸ್ವೀಕರಿಸಿ ರಾಯರ ಕೃಪೆಗೆ ಪಾತ್ರರಾಗಬೇಕೆಂದು ಶಾಖಾ ಮಠದ ವ್ಯವಸ್ಥಾಪಕರು ಹಾಗೂ ಸಿಬ್ಬಂದಿಗಳು ತಿಳಿಸಿದ್ದಾರೆ.

**ಸಹಕಾರಿ ಸಂಘದ ನೂತನ ನ್ಯಾಯ ಬೆಲೆ ಅಂಗಡಿ, ಕಡಲೆ ಖರೀದಿ ಕೇಂದ್ರ ಪ್ರಾರಂಭ**

## ಖಾಲಿ ಇರುವ ನಿವೇಶನವನ್ನು ಸಂಘಕ್ಕೆ ಒದಗಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗ್ರಾಮದಿಂದ ದೂರವಿರುವ ಮಾರುತಿ ನಗರ ಕುಟುಂಬಗಳ ಬೇಡಿಕೆಯಂತೆ ನ್ಯಾಯಬೆಲೆ ಅಂಗಡಿಯ ಪರವಾನಿಗೆಯ ನಂತರ ತಡವಾಗಿಯಾದರೂ ಆರಂಭವಾಗಿದ್ದು, ಆ ಭಾಗದ ಬಡವರಿಗೆ ಅನುಕೂಲವಾಗಲಿದೆ ಎಂದು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ. 2ರ ನೂತನ ಅಧ್ಯಕ್ಷ ಮಹೇಶ ಮುಸ್ಕಿನಭಾವಿ ಹೇಳಿದರು.



ಇಲ್ಲಿಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ. 2ರ ನೂತನ ನ್ಯಾಯಬೆಲೆ ಅಂಗಡಿ ಹಾಗೂ ಸರಕಾರದಿಂದ ಬೆಂಬಲ ಬೆಲೆಯ ಕಡಲೆ ಖರೀದಿ ಕೇಂದ್ರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮುಂದಿನ ತಿಂಗಳಿನಿಂದ ಮರುತಿ ನಗರದ ಸಾರ್ವಜನಿಕ ಸಮುದಾಯ ಭವನದಲ್ಲಿ ತಾತ್ಕಲಿಕವಾಗಿ ನ್ಯಾಯಬೆಲೆ ಅಂಗಡಿ ತೆರೆದು ಪಡಿತರ ವಿತರಿಸಲಾಗುವುದು. ಈ ಹಿಂದೆ ಗ್ರಾಮ ಸಭೆಯ ನಿರ್ಣಯದಂತೆ ಅಭಿವೃದ್ಧಿ ಅಧಿಕಾರಿಗಳು ಖಾಲಿ ಇರುವ ನಿವೇಶನವನ್ನು ನಮ್ಮ ಸಂಘಕ್ಕೆ ಒದಗಿಸಿಕೊಡಬೇಕು. ಕಡಲೆ ಖರೀದಿಗೆ ಪ್ರತಿ ಕ್ವಿಂಟಲ್‌ಗೆ ಸರಕಾರ 5875 ರೂ ಬೆಂಬಲ ಬೆಲೆ ನಿಗದಿ ಮಾಡಿದ್ದು, ಪ್ರತಿ ಎಕರೆಗೆ 4 ಕ್ವಿಂಟಲ್‌ನಂತೆ ಒಂದು ಖಾತೆಗೆ 10 ಎಕರೆವರೆಗೂ 40 ಕ್ವಿಂಟಲ್ ಖರೀದಿ ಮಾಡಲಾಗುತ್ತಿದ್ದು, ರೈತರು ಸಹಕಾರ ನೀಡಬೇಕು ಎಂದರು.

ಸಂಘದ ಹಿರಿಯ ಸದಸ್ಯ ಅಜ್ಜಣ್ಣ ಪಾಟೀಲ ಮಾತನಾಡಿ, ಮಾರುತಿ ನಗರದ ಜನರ ಅನುಕೂಲಕ್ಕಾಗಿಯೇ ಕಳೆದ 4 ವರ್ಷದ ಹಿಂದೆಯೇ ಜಿಲ್ಲಾಧಿಕಾರಿಗಳು ನಮ್ಮ ಸಂಘಕ್ಕೆ ನ್ಯಾಯಬೆಲೆ ಅಂಗಡಿ ತೆರೆಯಲು ಅನುಮತಿ ನೀಡಿದ್ದರು. ಆದರೆ ಆಹಾರ ಇಲಾಖೆಯ ಅಧಿಕಾರಿಗಳ ನಿಷ್ಕಾಳಜಿಯಿಂದ ಇಲ್ಲಿಯವರೆಗೂ ಮುಂದೂಡುತ್ತಾ ಬಂದಿದ್ದು ವಿಷಾದನೀಯ. ಗ್ರಾಮದ ಅಬಿವೃದ್ಧಿ ಅಧಿಕಾರಿಗಳು ನಿಷ್ಪಕ್ಷಪಾತವಾಗಿ ಗ್ರಾಮದ ಜನರ ಕುಂದು ಕೊರೆತೆಗಳ ಬಗ್ಗೆ ಗಮನ ಹರಿಸಬೇಕು ಎಂದು ಒತ್ತಾಯಿಸಿದರು.

ಪಿ.ಡಿ.ಒ ಅಮೀರನಾಯಕ ಮಾತನಾಡಿ, ರೈತರ ಧ್ವನಿಯಾಗಿರುವ ಸಹಕಾರ ಸಂಘವು ಇನ್ನು ಮುಂದೆ ಬಡವರಿಗೆ ಸರಕಾರ ಉಚಿತವಾಗಿ ನೀಡುವ ಆಹಾರ ಧಾನ್ಯವನ್ನು ಪೂರೈಕೆ ಮಾಡುವ ಜವಾಬ್ದಾರಿ ವಹಿಸಿಕೊಂಡಿರುವುದು ಶ್ಲಾಘನೀಯ. ಗ್ರಾಮಸಭೆಯ ನಿರ್ಣಯದಂತೆ ಸಂಘಕ್ಕೆ ಗ್ರಾಮ ಪಂಚಾಯಿತಿಯಿಂದ ನಿವೇಶನ ಒದಗಿಸುವ ಕುರಿತು ಪರಿಶೀಲಿಸಲಾಗುವುದು ಎಂದರು.

ಸಂಘದ ಉಪಾಧ್ಯಕ್ಷ ಪರಸಪ್ಪ ಕರಿಯಲ್ಲಪ್ಪನವರ, ಲಕ್ಕುಂಡಿ ಬಿ.ಜೆ.ಪಿ ಮಂಡಲದ ಅಧ್ಯಕ್ಷ ಪ್ರಕಾಶ ಅರಹುಣಶಿ ಮಾತನಾಡಿದರು. ಹಿರಿಯರಾದ ಎ.ಬಿ. ಬಿರಾದಾರ, ನಿರ್ದೇಶಕರಾದ ಅಶೋಕ ಮುಸ್ಕಿನಭಾವಿ, ಮಲ್ಲಪ್ಪ ಹಗರಿ, ನಿಂಗಪ್ಪ ಮಂಗಳೂರು, ವಿರೂಪಾಕ್ಷಪ್ಪ ಕಮತರ, ಪಂಚಾಕ್ಷರಯ್ಯ ನಾಗಾವಿಮಠ, ಅನ್ನಪೂರ್ಣ ಹಡಗಲಿ, ಗಂಗವ್ವ ಮುಕ್ಕಣ್ಣವರ, ಕಲ್ಲಪ್ಪ ಬಣವಿ ವೇದಿಕೆಯಲ್ಲಿದ್ದರು. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ.ಬಿ. ಬೇಣಕಲ್ ಸ್ವಾಗತಿಸಿದರು. ಬಸವರಾಜ ಮುಳ್ಳಾಳ ನಿರೂಪಿಸಿದರು. ಶಿವು ಭಜಂತ್ರಿ ವಂದಿಸಿದರು.

## ಮಾ.1ರಂದು ಜೆಡಿಎಸ್ ಸಮಾವೇಶ; ಶಾಸಕ ಕೆ. ನೇಮಿರಾಜ ನಾಯ್ಕ



■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪಟ್ಟಣದಲ್ಲಿ ಜೆಡಿಎಸ್ ಪಕ್ಷದ ವತಿಯಿಂದ ಮಾರ್ಚ್ 1ರಂದು ಜನ ವಿರೋಧಿ ಸಮಾವೇಶ ಹಮ್ಮಿಕೊಳ್ಳಲಾಗಿದ್ದು, ರಾಜ್ಯ ಸರ್ಕಾರದ ವಿರುದ್ಧ ತೀವ್ರ ಪ್ರತಿಭಟನೆ ನಡೆಸಲಾಗುವುದು ಎಂದು ಶಾಸಕ ಕೆ. ನೇಮಿರಾಜ ನಾಯ್ಕ ತಿಳಿಸಿದರು.

ಪಟ್ಟಣದ ಶಾಸಕರ ಸಾರ್ವಜನಿಕ ಸಂಪರ್ಕ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಕಾಂಗ್ರೆಸ್ ಸರ್ಕಾರ ಜನ ವಿರೋಧಿ ನೀತಿಗಳನ್ನು ಅನುಸರಿಸುತ್ತಿದ್ದು, ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಜನರನ್ನು ಮೋಸಗೊಳಿಸುತ್ತಿದೆ ಎಂದು ಆರೋಪಿಸಿದರು.

ಕೃಷಿ ಕ್ಷೇತ್ರ ಸಂಪೂರ್ಣ ನಿರ್ಲಕ್ಷ್ಯಕ್ಕೊಳಗಾಗಿದೆ. ನೀರಾವರಿ ಯೋಜನೆಗಳು ಸ್ಥಗಿತಗೊಂಡಿವೆ. ಮರಬ್ಬಿಹಾಳ ಏತ ನೀರಾವರಿ ಯೋಜನೆ ಹಾಗೂ ಕೊಟ್ಟೂರು ಭಾಗದ 17 ಕೆರೆಗಳನ್ನು ತುಂಬಿಸುವ ಯೋಜನೆಗಳಿಗೆ ಅನುದಾನ ಮಂಜೂರಾಗಿದ್ದರೂ ಹಣ ಬಿಡುಗಡೆ ಮಾಡಿಲ್ಲ ಎಂದು ಅವರು ಆಕ್ಷೇಪಿಸಿದರು.

ಮೂರು ವರ್ಷಗಳಿಂದ ಗಂಗಾ ಕಲ್ಯಾಣ ಯೋಜನೆಗೂ ಹಣ ನೀಡಿಲ್ಲ. ವಿವಿಧ ಅಭಿವೃದ್ಧಿ ಯೋಜನೆಗಳಿಗೆ, ಮನೆ ನಿರ್ಮಾಣ ಯೋಜನೆಗಳಿಗೆ ಹಾಗೂ ನೀರಾವರಿ ಕಾಮಗಾರಿಗಳಿಗೆ ಅಗತ್ಯ ಅನುದಾನ ಇಲ್ಲದಿರುವುದು ಸರ್ಕಾರದ ವಿಫಲತೆಯಾಗಿದೆ ಎಂದು ಟೀಕಿಸಿದರು.

ಕ್ಷೇತ್ರದಲ್ಲಿ ನೆನೆಗುದಿಗೆ ಬಿದ್ದಿರುವ ಏತ ನೀರಾವರಿ ಯೋಜನೆಗಳಿಗೆ ಎರಡು ವರ್ಷಗಳಿಂದ ಅನುದಾನ ಸಿಗದೆ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಜನರೇ ಸರ್ಕಾರಕ್ಕೆ ತಕ್ಕ ಉತ್ತರ ನೀಡಲಿದ್ದಾರೆ ಎಂದು ಎಚ್ಚರಿಸಿದರು.

ಶಾಲಾ ಮಕ್ಕಳ ಪ್ರವಾಸ ಯೋಜನೆಯಲ್ಲಿ ಜಾತಿ ತಾರತಮ್ಯ ಮಾಡಲಾಗುತ್ತಿದೆ ಎಂಬ ಆರೋಪವನ್ನೂ ಅವರು ಹೊರಹಾಕಿ, ಎಲ್ಲಾ ಮಕ್ಕಳಿಗೂ ಸಮಾನ ಅವಕಾಶ ಕಲ್ಪಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು. ಚಿಕ್ಕ ಮಕ್ಕಳಲ್ಲಿ ಜಾತಿ ಭೇದಭಾವ ಬೆಳೆಸಬಾರದು ಎಂದು ಅವರು ಹೇಳಿದರು.

ಜೆಡಿಎಸ್ ಜಿಲ್ಲಾಧ್ಯಕ್ಷ ಬಾದಾಮಿ ಮೃತ್ಯುಂಜಯ (ಮುತ್ತಣ್ಣ) ಮಾತನಾಡಿ, ಮಾರ್ಚ್ 1ರಂದು ನಡೆಯುವ ಸಮಾವೇಶದಲ್ಲಿ ಪಕ್ಷದ ಯುವ ಮುಖಂಡ ಎಚ್.ಡಿ. ನಿಖಿಲ್ ಕುಮಾರಸ್ವಾಮಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಸಮಾವೇಶದ ಅಂಗವಾಗಿ ಹಳೆ ಹಗರಿಬೊಮ್ಮನಹಳ್ಳಿ ನೀರಾವರಿ ಇಲಾಖೆಯಿಂದ ಬೈಕ್ ಜಾಥಾ, ಆಟೋರಿಕ್ಷಾ ಹಾಗೂ ಎತ್ತಿನ ಬಂಡಿಗಳ ಮೆರವಣಿಗೆ ನಡೆಯಲಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ತಾಲೂಕು ಅಧ್ಯಕ್ಷ ವೈ. ಮಲ್ಲಿಕಾರ್ಜುನ, ಪಕ್ಷದ ಮುಖಂಡರಾದ ಕೃಷ್ಣಮೂರ್ತಿ, ಧರ್ಮಕರ್ತರು, ಚಂದ್ರಶೇಖರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಗದಗ ವಿಭಾಗದ ತಂಡಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ದಿ. 21-02-2026 ರಿಂದ 22-02-2026 ರವರೆಗೆ ಬೆಳಗಾವಿ ನಗರದಲ್ಲಿ 07 ಜಿಲ್ಲೆಗಳ ವಿಭಾಗ ಮಟ್ಟದ ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಾಂಸ್ಕೃತಿಕ ಹಾಗೂ ಕ್ರೀಡಾಕೂಟಗಳನ್ನು ಆಯೋಜಿಸಲಾಗಿತ್ತು.

ಈ ಕ್ರೀಡಾಕೂಟಗಳಲ್ಲಿ ಗದಗ ವಿಭಾಗವು ಗಮನಾರ್ಹ ಸಾಧನೆ ಮಾಡಿದೆ. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ. ನಂದಾ ಹಣಬರಟ್ಟಿ ಅವರ ನೇತೃತ್ವದಲ್ಲಿ ಭಾಗವಹಿಸಿದ ತಂಡಗಳು ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾಗಿ ಮೆಚ್ಚುಗೆ ಗಳಿಸಿವೆ.

**ಸ್ಪರ್ಧೆಗಳ ಫಲಿತಾಂಶ ಹೀಗಿದೆ:**

**ಭಾವಗೀತೆ:** ಶ್ರೀಕಾಂತ ಹರಣಹುಣಸಿ - ವಿಜೇತ, ಮಹಿಳೆಯರ ಥ್ರೋಬಾಲ್ ತಂಡ - ವಿಜೇತರು, ಪುರುಷರ ಕ್ರಿಕೆಟ್ ತಂಡ - ವಿಜೇತರು. ಈ ಮೂಲಕ ಮೇಲ್ಕಂಡ ಎಲ್ಲರು ಬೆಂಗಳೂರು ನಗರದಲ್ಲಿ ನಡೆಯಲಿರುವ ರಾಜ್ಯಮಟ್ಟದ ಸಮಾಜ ಕಲ್ಯಾಣ ಇಲಾಖೆಯ ಕ್ರೀಡಾಕೂಟದಲ್ಲಿ ಭಾಗವಹಿಸಲು ಆಯ್ಕೆಯಾಗಿದ್ದಾರೆ.

ರಾಜ್ಯಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾದ ಎಲ್ಲಾ ಕ್ರೀಡಾಪಟುಗಳಿಗೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಡಾ. ನಂದಾ ಹಣಬರಟ್ಟಿ, ಜಿಲ್ಲಾ ಕಚೇರಿಯ ಪತ್ರಾಂಕಿತ ವ್ಯವಸ್ಥಾಪಕರಾದ ಶ್ರೀಮತಿ ಮಂಜುಳಾ ಸೋಮಕ್ಕನವರ, ವಿದ್ಯಾವತಿ ಕುರಹಟ್ಟಿ, ಸಹಾಯಕ ನಿರ್ದೇಶಕರಾದ ಗೋಪಾಲ ಲಮಾಣಿ, ಬಿ.ವಿ. ಬಡಿಗೇರ, ಶ್ರೀಮತಿ ಗೀತಾ ಆಲೂರ, ಉದಯಕುಮಾರ ಯಲಿವಾಳ ಹಾಗೂ ಕಚೇರಿ ಅಧೀಕ್ಷಕರಾದ ಮಂಜುಳಾ ಎನ್., ಮುತ್ತಣ್ಣ ಸಂಕನೂರ, ಚಂದ್ರಪ್ಪ ಮಾದರ ಅವರು ಶುಭಾಶಯಗಳನ್ನು ಕೋರಿದ್ದಾರೆ.




## ನರೇಗಲ್ಲಿಗೆ ಬಂತು ವರ್ಷದ ಮೊದಲ ಮಳೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಈ ವರ್ಷದ ಮಳೆಗಾಲವಿನ್ನೂ ಪ್ರಾರಂಭವಾಗಿಲ್ಲ. ಆದರೂ ಸೋಮವಾರ ಸಂಜೆ ನರೇಗಲ್ಲದಲ್ಲಿ 15-20 ನಿಮಿಷಗಳ ಕಾಲ ಅಕಾಲಿಕ ಮಳೆ ಸುರಿದು ರೈತರಲ್ಲಿ ಆತಂಕ ಮೂಡಿಸಿತು. ಮಳೆ ಸ್ವಲ್ಪ ಬಿರುಸಾಗಿಯೆ ಸುರಿಯಿತು. ರಸ್ತೆಯ ಮೇಲೆಲ್ಲ ನೀರು ಹರಿಯಿತು. ಶಾಲೆಯಿಂದ ಮನೆಗೆ ಮರಳುತ್ತಿದ್ದ ಮಕ್ಕಳು ಮಳೆಯಿಂದ ತೊಂದರೆಗೊಳಗಾದರು.



ಚಳಿಗಾಲ ಸರಿದು ಈಗಿನ್ನೂ ಬೇಸಿಗೆ ಪ್ರಾರಂಭವಾಗುತ್ತಿದೆ. ಶಿವರಾತ್ರಿಯ ನಂತರ ಬಿಸಿಲಿಗೆ ಜನ ಶಿವಶಿವ ಎನ್ನುತ್ತಾರಂತೆ. ಆದರೆ ಶಿವರಾತ್ರಿ ಮುಗಿದು ಎಂಟು ದಿನಗಳು ಕಳೆದರೂ ಅಷ್ಟೊಂದು ಪರಿಯ ಬಿಸಿಲು ಜನರನ್ನು ಬಾಧಿಸಿಲ್ಲ. ಹೀಗಾಗಿ ಬೇಸಿಗೆ ಕಾಲದ ಪ್ರಾರಂಭವಿಲ್ಲದೆ ಸುರಿದ ಅಕಾಲಿಕ ಮಳೆ ಜನತೆಯಲ್ಲಿ ಸೋಜಿಗದ ಜೊತೆಗೆ ಆತಂಕವನ್ನುಂಟುಮಾಡಿತು.

ಜೋಳದ ಕಟಾವು ಆಗದೆ ಮಳೆಯಾದರೆ ಜೋಳದ ತೆನೆ ಕಪ್ಪಾಗುತ್ತದೆ.

ಕಾಳುಗಳು ಕಪ್ಪಾಗುತ್ತವೆ. ಕುಶಿಬಿಯ ತೆನೆಯಲ್ಲಿ ನೀರು ಹೊಕ್ಕರೆ ಅದರ ಕಾಳೂ ಕಪ್ಪಾಗುತ್ತದೆ. ಹೊಲದಲ್ಲಿ ರಾಶಿ ಮಾಡಲು ಬಿಟ್ಟಿರುವ ಬೆಳೆಯೆಲ್ಲವೂ ಹಾಳಾಗುತ್ತದೆ. ನೀರಿನಿಂದ ತೊಯ್ದ ಹೊಟ್ಟನ್ನು ಒಯ್ಯಲು ಯಾರೂ ಇಚ್ಛೆ ಪಡುವುದಿಲ್ಲ. ಹೀಗೆ ರೈತರಿಗೆ ಅನೇಕ ತೊಂದರೆಗಳಾಗುತ್ತವೆ ಎಂದು ರೈತರಾದ ಬಾಳಪ್ಪ ಸೋಮಗೊಂಡ, ಕೆ.ಎಸ್. ಕಳಕಣ್ಣವರ, ಎಸ್.ಕೆ. ಪಾಟೀಲ ಅಭಿಪ್ರಾಯ ವ್ಯಕ್ತಪಡಿಸಿದರು.

## ಶಾಸಕ ಡಾ. ಚಂದ್ರು ಜನರಿಗೆ ದ್ರೋಹವೆಸಗಿದ್ದಾರೆ

▶▶ಮೊದಲನೇ ಪುಟದಿಂದ

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಕ್ಷೇತ್ರಕ್ಕೆ ಕೋಟ್ಯಾಂತರ ರೂ ಹಣ ಹರಿದು ಬಂದಿದೆ. ಅದರೆ ಡಾ. ಚಂದ್ರು ಲಮಾಣಿ ಕಾಂಗ್ರೆಸ್ ಪಕ್ಷದಿಂದ ನಯಾಪೈಸೆ ದುಡ್ಡು ಬಂದಿಲ್ಲ ಎಂದು ಹೇಳುವ ಮೂಲಕ ಜನರಿಗೆ ತಪ್ಪು ಮಾಹಿತಿ ನೀಡುತ್ತಾ ಭ್ರಷ್ಟಾಚಾರದಲ್ಲಿ ತೊಡಗಿದ್ದರು. ಮಾಡಲು ಸಾಕಷ್ಟು ಕೆಲಸವಿದ್ದರೂ ಅವರ ಚಿತ್ತ ಕೇವಲ ದುಡ್ಡು ಮಾಡುವತ್ತ ಇದೆ. ಆದಾಗ್ಯೂ ಕಾಂಗ್ರೆಸ್ ಪಕ್ಷದ ಪ್ರಶ್ನಾತೀತ ರಾಜರಾಣಿ ಹೆಚ್.ಕೆ. ಪಾಟೀಲರ ಹೆಸರನ್ನು ಎಳೆದು ತರುವ ಕೆಟ್ಟ ಮನಸ್ಥಿತಿ ಜನರಿಗೆ ಅರ್ಥವಾಗುತ್ತದೆ. ವಿದ್ಯಾವಂತರಾದ ಇವರು ಆತ್ಮಸಾಕ್ಷಿಯಿಂದ ರಾಜಕೀಯ ಕ್ಷೇತ್ರಕ್ಕೆ ರಾಜೀನಾಮೆ ನೀಡಬೇಕು ಎಂದರು.


ಬಳಿಕ ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು ಶಾಸಕ ಡಾ. ಚಂದ್ರು ಲಮಾಣಿ ಅವರ ರಾಜೀನಾಮೆ ಪಡೆಯಬೇಕು ಎಂದು ತಹಸೀಲ್ದಾರರ ಮೂಲಕ ರಾಜ್ಯಪಾಲರಿಗೆ ಮನವಿ ಸಲ್ಲಿಸಿದರು. ಈ ವೇಳೆ ರಾಮಣ್ಣ ಲಮಾಣಿ(ಶಿಗ್ಲಿ), ಯಲ್ಲಪ್ಪ ಸೂರಣಗಿ, ನೀಲಪ್ಪ ಶರಸೂರಿ, ಶಿವಣ್ಣ ಕಬ್ಬೇರ, ಕಲ್ಲಪ್ಪ ಗಂಗಣ್ಣವರ, ಮನೋಜ ರಾ-ಟೋಡ, ಜಗದೀಶ ಹುಲಿಗೆಮ್ಮನವರ, ಶಿವರಾಜಗೌಡ ಪಾಟೀಲ, ಪರಮೇಶ ಲಮಾಣಿ, ತಿಪ್ಪಣ್ಣ ಸಂಶಿ, ನಾಗರಾಜ ದೊಡ್ಡಮನಿ, ವಾಸೀಂಅಕ್ರಮ ಮುಚ್ಚಾಲೆ, ರಾಜು ಓಲೇಕಾರ, ರಾಜರತ್ನ ಹುಲಗೂರ, ನೀಲಪ್ಪ ಪಡಗೇರಿ, ಶಶಿಕಲಾ ಬಡಿಗೇರ, ರಫೀಕ ಕಲಬುರ್ಗಿ, ಸಂತೋಷ ತೇಲಿ, ರಂಜಾನಸಾಬ ನದಾಫ್ ಮುಂತಾದವರಿದ್ದರು.

# ಕರ್ನಾಟಕ ವಿ.ವಿ ಬ್ಲೂ ಆಗಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಆರ್.ಎನ್. ದೇಶಪಾಂಡೆ ಸರಕಾರಿ ಪ್ರಥಮದರ್ಜೆ ಮಾಹಾವಿದ್ಯಾಲಯದ ವಿದ್ಯಾರ್ಥಿನಿ ರೇಖಾ ಗೋಕಾವಿ ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಜರುಗಿದ ಮಹಿಳಾ ಖೋಖೋ ತಂಡದ ಆಯ್ಕೆ ಪ್ರಕ್ರಿಯೆಯಲ್ಲಿ ಕರ್ನಾಟಕ ವಿಶ್ವ ವಿದ್ಯಾಲಯದ ಬ್ಲೂ ಆಗಿ ಆಯ್ಕೆಯಾಗಿದ್ದಾರೆ.

ಏಪ್ರಿಲ್ 4ರಂದು ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ನಡೆಯಲಿರುವ ಅಂತರ ವಿಶ್ವ ವಿದ್ಯಾಲಯಗಳ ದಕ್ಷಿಣ ವಲಯ ಖೋಖೋ ಪಂದ್ಯಾವಳಿಯಲ್ಲಿ ಕರ್ನಾಟಕವನ್ನು ಪ್ರತಿನಿಧಿಸುತ್ತಿರುವುದಕ್ಕೆ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಕಾನೂನು ಹಾಗೂ ಸಂಸದೀಗಳ ವ್ಯವಹಾರ



ಸಚಿವ ಎಚ್.ಕೆ. ಪಾಟೀಲ ಹಾಗೂ ಸರ್ವ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ ಎಂದು ಪ್ರಾಚಾರ್ಯ ಆರ್.ಎಂ. ಕಲ್ಲನಗೌಡ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕ ಸಭೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣಾ ಆಯೋಗ, ಬೆಂಗಳೂರು ಇವರ ವತಿಯಿಂದ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ ಆರ್ಥಿಕ ವರ್ಷ 2024-25ರ ವಾರ್ಷಿಕ ಕಾರ್ಯಕ್ಷಮತೆ ಪರಿಶೀಲನೆ (ಂಕಖ) ಅರ್ಜಿಯ ಸಂಬಂಧ ಹುಬ್ಬಳ್ಳಿ ನಿಗಮ ಕಛೇರಿಯ ವಿದ್ಯುತ್ ಭವನದಲ್ಲಿ ಸಾರ್ವಜನಿಕ ವಿಚಾರಣೆ ಸಭೆಯನ್ನು ಫೆ. 26ರ ಬೆಳಿಗ್ಗೆ 10 ಗಂಟೆಗೆ ಏರ್ಪಡಿಸಿದೆ. ಆಸಕ್ತ ಸಾರ್ವಜನಿಕರು ವಿಚಾರಣೆಯಲ್ಲಿ ಭಾಗವಹಿಸಿ, ತಮ್ಮ ಸಲಹೆ/ಆಕ್ಷೇಪಣೆಗಳನ್ನು ಮೌಖಿಕ/ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

### ಶಾಸಕ ಡಾ. ಲಮಾಣಿ ಲೋಕಾಯುಕ್ತ ದಾಳಿಗೂ ನಮಗೂ ಯಾವುದೇ ಸಂಬಂಧವಿಲ್ಲ; ಕುಮಾರ ಮಹಾರಾಜರು

# ನಾನು ಅವರೊಡನೆ ರಾಜಿ ಆಗುವುದಿಲ್ಲ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಾಸಕ ಡಾ. ಚಂದ್ರು ಲಮಾಣಿ ಅವರ ಮೇಲೆ ಇತ್ತೀಚೆಗೆ ನಡೆದ ಲೋಕಾಯಕ್ತ ದಾಳಿಗೂ ನಮಗೂ ಯಾವುದೇ ಸಂಬಂಧವಿಲ್ಲ ಹಾಗೂ ಆರೋಪ ಮಾಡಿರುವ ಗುತ್ತಿಗೆದಾರ ಸಹ ಯಾರೆಂಬುದು ನಮಗೆ ತಿಳಿದಿಲ್ಲ ಎಂದು ಆದರಳ್ಳಿಯ ಗವಿಮಠದ ಕುಮಾರ ಮಹಾರಾಜರು ಹೇಳಿದರು.

ಅವರು ಸೋಮವಾರ ಶಿರಹಟ್ಟಿಯ ಪ್ರವಾಸಿ ಮಂದಿರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ವೈರಲ್ ಆಗಿರುವ ವಾಯ್ಸ್ ಕರೆ ನಮ್ಮದೇ ಆಗಿದ್ದು, ಅದನ್ನು ನಾವು ಸಮರ್ಥಿಸಿಕೊಳ್ಳುತ್ತೇವೆ. ನಾನು ಮಾತನಾಡಿದ್ದು ಒಂದು ಪಕ್ಷದ ಮುಖಂಡ ಮತ್ತು ಪಂಚಮಸಾಲಿ ಅಧ್ಯಕ್ಷರಾಗಿದ್ದಾರೆ. ನಾಲ್ಕು ತಿಂಗಳುಗಳ ಹಿಂದೆ ಅವರ ಕಡೆಯವರೇ ಆದ ಸೋನು ಲಮಾಣಿ ಎನ್ನುವರು ಕರೆ ಮಾಡಿ ನೀವು ಶಾಸಕರೊಂದಿಗೆ ಒಂದಾಗಬೇಕು, ಇಲ್ಲವಾದರೆ ಸಮಸ್ಯೆಗಳನ್ನು ಎದುರಿಸುತ್ತೀರಿ ಎಂದು ಹೇಳಿರುವ ಫೋನ್ ರೆಕಾರ್ಡಿಂಗ್ ನಮ್ಮ ಬಳಿಯಿದೆ.



ರೈತ ಹೋರಾಟದಲ್ಲಿ ಭಾಗವಹಿಸಿದಾಗ ಶಾಸಕರು ಬಹಳಷ್ಟು ಬೆದರಿಕೆ ಕರೆಗಳನ್ನು ಮಾಡಿದ್ದಾರೆ. ಆದರಳ್ಳಿ ಗ್ರಾಮದ ಹಿರಿಯರಿಗೆ ಫೋನ್ ಕರೆ ಮಾಡುವ ಮೂಲಕ ಸ್ವಾಮಿಗಳನ್ನು ಮಠದಿಂದ ಹೊರಗೆ ಹಾಕಿ ಅಂದರೆ ನಿಮಗೂ ದುಡ್ಡನ್ನು ಕೊಡುತ್ತೇನೆ ಎನ್ನುವುದು, ಅವರು ಇರುವುದರಿಂದ ಚುನಾವಣೆಯಲ್ಲಿ ಗೆಲ್ಲಲು ಆಗುವುದಿಲ್ಲ ಎಂದು ಅವಾಚ್ಯ ಶಬ್ದಗಳನ್ನು ಬಳಸಿದ್ದರಿಂದ ನಮಗೆ ಸಿಟ್ಟು ಬಂದು ಅವರ ಬಗ್ಗೆ ಮಾತನಾಡಿದ್ದು ನಿಜ. ಆದರೆ ಆ ವಾಯ್ಸ್ ಕಾಲ್‌ನ್ನು ಪರೀಕ್ಷೆ ಮಾಡಿಸಿದಾಗ ಅದು ಎಷ್ಟು ದಿನಗಳ ಹಿಂದಿನದ್ದು ಎಂದು ತಿಳಿಯುತ್ತದೆ.

ಈ ಶಾಸಕರು ಸ್ವಾಮಿಗಳು, ಅಧಿಕಾರಿಗಳು, ರೈತರು ಯಾರನ್ನು ಬಿಡುತ್ತಿಲ್ಲ, ಅಷ್ಟೊಂದು ಕ್ರೂರಿ ಮನುಷ್ಯರಾಗಿದ್ದಾರೆ. ಡಾ. ಚಂದ್ರು ಲಮಾಣಿಯವರು ಅವರದ್ದೇ ಸಮಾಜದ ಸ್ವಾಮಿಗಳನ್ನು ಬಿಡುತ್ತಿಲ್ಲ ಎಂದ ಮೇಲೆ ಉಳಿದ ಸ್ವಾಮಿಗಳ ಗತಿಯೇನು? ಯಾವುದೇ ಸಮುದಾಯದಿಂದ ನನಗೆ ತೊಂದರೆ ಬಂದಿಲ್ಲ. ಎಲ್ಲರೂ ನಮ್ಮವರೇ ಎಂದು ತಿಳಿದು ವಿರಕ್ತ ಮಠದ ಸ್ವಾಮಿಗಳಾಗಿ ಬಸವ ತತ್ವವನ್ನು ಅಳವಡಿಸಿಕೊಂಡು ದೇವರ ಸೇವೆ ಮಾಡುತ್ತ ಬಂದಿದ್ದೇನೆ.

ನಮ್ಮ ಮತ್ತು ಅವರ ನಡುವೆ ಯಾವುದೇ ವೈಷಮ್ಯಗಳಿಲ್ಲ. ಸದಾಶಿವ ಆಯೋಗದ ಒಳ ಮೀಸಲಾತಿ ಹೋರಾಟದ ಸಂದರ್ಭದಲ್ಲಿ ಬಿಜೆಪಿ ಪಕ್ಷವನ್ನು ನಾನು ವಿರೋಧಿಸಿದ್ದೆ ಮತ್ತು ಸೇವಾಲಾಲ ಜಯಂತ್ಯುತ್ಸವದ ಸಂದರ್ಭದಲ್ಲಿ ಕಳೆದ 20 ವರ್ಷಗಳಿಂದ ಕಾರ್ಯ ನಿರ್ವಹಿಸುತ್ತಿರುವ ಬಂಜಾರ ಸಮಾಜದ ತಾಲೂಕು ಅಧ್ಯಕ್ಷರನ್ನು ಬದಲಾವಣೆ ಮಾಡುವಂತೆ ನಾವು ತಿಳಿಸಿದ್ದೆವು. ಇಲ್ಲಿಂದ ನಮಗೆ ಮತ್ತು ಶಾಸಕರ ನಡುವೆ ವೈರತ್ವ ಪ್ರಾರಂಭವಾಗಿ, ಅಲ್ಲಿಂದ ಚಂದ್ರು ಲಮಾಣಿ ಅವರು ನನ್ನ ವಿರುದ್ಧ ಷಡ್ಯಂತ್ರ ರೂಪಿಸಲು ಆರಂಭಿಸಿದ್ದರು. ನಾನು ಯಾವುದೇ ಪಕ್ಷದ ಮತ್ತು ವ್ಯಕ್ತಿಯ ವಿರುದ್ಧವಾಗಿಲ್ಲ. ಧರ್ಮದ ಪರವಾಗಿದ್ದು, ಅಧರ್ಮದ ಮಾರ್ಗ ಹಿಡಿಯುವವರ ವಿರುದ್ಧ ನಾನು ಈಗಲೂ ಹೋರಾಡುತ್ತೇನೆ ಎಂದರು. ಸೋನು ಲಮಾಣಿ ಅವರು ನನ್ನ ವಿರುದ್ಧ ದೂರು ದಾಖಲಿಸುವುದಾದರೆ ದಾಖಲಿಸಲಿ. ಅವರು ಮಾತನಾಡಿರುವ ಪ್ರತಿಯೊಂದು ವಾಯ್ಸ್ ರೆಕಾರ್ಡಿಂಗ್ ನನ್ನ ಬಳಿಯಿದೆ. ನಮ್ಮ ಮಠದ ಸುತ್ತಮುತ್ತಲಿನ ಅಭಿವೃದ್ಧಿ ಕೆಲಸದಲ್ಲಿಯೇ ಹಣವನ್ನು ಪಡೆದಿದ್ದಾರೆ. ನಾನು ಎಂದೂ ಅವರೊಡನೆ ರಾಜಿ ಆಗುವುದಿಲ್ಲ. ನಾನು ಎಂದಿಗೂ ಶಾಸಕರ ವಿರುದ್ಧವಾಗಿಯೇ ಇರುತ್ತೇನೆ. ಸೋನು ಲಮಾಣಿ ನನಗೆ ಕಳೆದ ಎಂಟು ತಿಂಗಳುಗಳ ಹಿಂದೆ ಪರಿಚಯ. ಬೆಂಗಳೂರಿಗೆ ಕರೆದುಕೊಂಡು ಹೋಗುತ್ತೇನೆ, ಶಾಸಕರೊಡನೆ ರಾಜಿಯಾಗಿ ಎಂದು ಹೇಳಿದ್ದರು.

> ನಮ್ಮ ಭಾಗದ ಬಹುತೇಕ ಜನರು ದುಡಿಮೆಗಾಗಿ ಗೋವಾದಲ್ಲಿದ್ದು, ಅವರಿಗೇನಾದರೂ ತೊಂದರೆಯಾದರೆ ನಾನು ಅವರ ಭೇಟಿಗೆ ಹೋಗುತ್ತೇನೆ. ಆದರೆ ನಾನೆಂದೂ ಕ್ಯಾಸಿನೋ ಹೋಗುವುದು, ಮೋಜು-ಮಸ್ತಿ ಮಾಡುವುದು ಮಾಡಿಲ್ಲ. ಇಂತಹ ಕೆಲಸಗಳನ್ನು ನಾವು ಮಾಡಿರುವ ಬಗ್ಗೆ ಯಾರಾದರೂ ದಾಖಲೆ ಕೊಟ್ಟರೆ ನಾವು ನಮ್ಮ ಪೀಠ ತ್ಯಾಗ ಮಾಡಲು ಸಿದ್ಧರಿದ್ದೇವೆಂದು ಕುಮಾರ ಮಹಾರಾಜರು ಹೇಳಿದರು.

# ದ್ವಿತೀಯ ಪಿ.ಯು.ಸಿ ವಿದ್ಯಾರ್ಥಿಗಳಿಗೆ ಬಸ್ಸುಗಳಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

ಫೆಬ್ರವರಿ 28 ರಿಂದ ಮಾರ್ಚ್ 17ರವರೆಗೆ ನಡೆಯಲಿರುವ ದ್ವಿತೀಯ ಪಿ.ಯು.ಸಿ ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಬಸ್ಸುಗಳಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ಕಲ್ಪಿಸಲಾಗಿದೆ.

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಪ್ರಕಟಿಸಿದ ತಿಳಿವಳಿಕೆಯ ಪ್ರಕಾರ, ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳು ತಮ್ಮ ದ್ವಿತೀಯ ಪಿ.ಯು.ಸಿ ಪ್ರವೇಶ ಪತ್ರವನ್ನು ತೋರಿಸಿ, ವಾಸಸ್ಥಳದಿಂದ ನಿಯೋಜಿತ ಪರೀಕ್ಷಾ ಕೇಂದ್ರಗಳಿಗೆ ತೆರಳಲು ಹಾಗೂ ಪರೀಕ್ಷೆ ಮುಗಿದ ನಂತರ ವಾಪಸ್ ವಾಸಸ್ಥಳಕ್ಕೆ ಹಿಂದಿರುಗಲು ಉಚಿತವಾಗಿ ಪ್ರಯಾಣಿಸಬಹುದು.

ಈ ಸೌಲಭ್ಯವು ಸಂಸ್ಥೆಯ ನಗರ, ಉಪನಗರ, ಸಾಮಾನ್ಯ ಹಾಗೂ ವೇಗದೂತ ಬಸ್ಸುಗಳಲ್ಲಿ ಅನ್ವಯವಾಗುತ್ತದೆ. ಪರೀಕ್ಷಾ ಅವಧಿಯಲ್ಲಿ ವಿದ್ಯಾರ್ಥಿಗಳಿಗೆ ಯಾವುದೇ ಅಸೌಕರ್ಯವಾಗದಂತೆ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸಂಸ್ಥೆ ತಿಳಿಸಿದೆ.

ಪರೀಕ್ಷಾರ್ಥಿಗಳು ಈ ಸೌಲಭ್ಯವನ್ನು ಸಮರ್ಪಕವಾಗಿ ಬಳಸಿಕೊಳ್ಳುವಂತೆ ಮನವಿ ಮಾಡಲಾಗಿದೆ.

# ಕಾಮರತಿ ಉತ್ಸವಕ್ಕೆ 101 ವರ್ಷದ ಸಂಭ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ನಾಲ್ವಾಡ ಗಲ್ಲಿಯ ಕಾಮರತಿ ಉತ್ಸವ ಇದೀಗ 101 ವರ್ಷದ ಸಂಭ್ರಮಾಚರಣೆಯಲ್ಲಿದ್ದು, ತನ್ನಿಮಿತ್ತ ಹಲವಾರು ವೈವಿಧ್ಯಮಯ ಕಾರ್ಯಗಳನ್ನು ಹಮ್ಮಿಕೊಳ್ಳಲು ಉತ್ಸವ ಸಮಿತಿ ನಿರ್ಧರಿಸಿದೆ.

ನಾಲ್ವಾಡಗಲ್ಲಿಯ ಅಂಗನವಾಡಿ ಶಾಲೆಯ ಪ್ರಾಂಗಣದಲ್ಲಿ ರವಿವಾರ ನಾಲ್ವಾಡ ಓಣಿಯ ಗುರು-ಹಿರಿಯರ, ಯುವಕರ ಉಪಸ್ಥಿತಿಯಲ್ಲಿ ಜರುಗಿದ ಉತ್ಸವ ಸಮಿತಿಯ ಪೂರ್ವಭಾವಿ ಸಭೆಯಲ್ಲಿ ಈ ನಿರ್ಧಾರವನ್ನು ಕೈಗೊಳ್ಳಲಾಯಿತು.

ಮಾ. 5ರಂದು ಸಂಜೆ 6.30 ಗಂಟೆಗೆ ಉತ್ಸವದ ಸಭಾ ಮಂಟಪದಲ್ಲಿ 101 ವರ್ಷದ ಸಂಭ್ರಮಕ್ಕಾಗಿ ಮುತ್ತೈದೆಯರಿಗೆ ಉಡಿ ತುಂಬುವ ಕಾರ್ಯಕ್ರಮ ಹಮ್ಮಿಕೊಳ್ಳುವ ಬಗ್ಗೆ ನಿರ್ಧರಿಸಲಾಯಿತು.

ಮಾ. 7ರಂದು ಮುಂಜಾನೆ 10.30 ಗಂಟೆಗೆ ಜಗ್ಗಲಗಿಯ ಮೇಳದೊಂದಿಗೆ ಬೃಹತ್ ಮೆರವಣಿಗೆ ಜರುಗಲಿದೆ. ನಾಲ್ವಾಡ ಗಲ್ಲಿಯಲ್ಲಿ ಕಾಮರತಿ ಉತ್ಸವ ಆಚರಿಸಿಕೊಂಡು ಬಂದ ಪರಂಪರೆಯನ್ನು ವಿವರಿಸಿ ಯುವಕರು ಒಗ್ಗಟ್ಟಿನೊಂದಿಗೆ, ಯಾವುದೇ ತಂಟೆ ತಕರಾರು ಬರದಂತೆ ಶಾಂತಿ ಸಮಾಧಾನದಿಂದ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಬೇಕೆಂದು ಸಭೆಯಲ್ಲಿ ಉಪಸ್ಥಿತರಿದ್ದ ಹಿರಿಯರು ಸೂಚನೆ ನೀಡಿದರು.

# ಗದಗ ಜಿಲ್ಲೆ ಸಹಕಾರ ಸಂಘಗಳ ಕುರಿತು ಸಾರ್ವಜನಿಕ ಪ್ರಕಟಣೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆ ಸಹಕಾರ ಸಂಘಗಳ ಕುರಿತು ಸಾರ್ವಜನಿಕ ಪ್ರಕಟಣೆ

ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಕೆಳಕಂಡ ಸಹಕಾರ ಸಂಘಗಳು ಕಳೆದ 5 ರಿಂದ 10 ವರ್ಷಗಳಿಂದ ಕಾರ್ಯಾಚರಣೆ ನಡೆಸದೇ ಸಂಪೂರ್ಣ ಸ್ಥಗಿತಗೊಂಡಿರುವುದು ಗಮನಕ್ಕೆ ಬಂದಿದೆ.

ಸಂಬಂಧಿತ ಸಂಘಗಳಲ್ಲಿ ಲೆಕ್ಕಪರಿಶೋಧನೆ ನಡೆದಿಲ್ಲ, ನಿಗದಿತ ಅವಧಿಯಲ್ಲಿ ಚುನಾವಣೆಗಳು ಜರುಗಿಲ್ಲ, ಕರ್ನಾಟಕ ಸಹಕಾರ ಸಂಘಗಳ ಕಾಯ್ದೆಯ ಪ್ರಕಾರ ವಾರ್ಷಿಕ ಮಹಾಸಭೆ ನಡೆದಿಲ್ಲ, ಆಡಳಿತ ಮಂಡಳಿ ಹಾಗೂ ಸಾಮಾನ್ಯ ಸದಸ್ಯರು ಚಟುವಟಿಕೆಗಳಲ್ಲಿ ಆಸಕ್ತಿ ತೋರಿಸಿಲ್ಲ, ಅಗತ್ಯ ದಾಖಲೆಗಳು, ಆಡಳಿತ ಮಂಡಳಿ ಸದಸ್ಯರ ಹೆಸರು/ವಿಳಾಸ ಲಭ್ಯವಿಲ್ಲ

ಸಂಘಗಳು ತಮ್ಮ ಮೂಲ ಉದ್ದೇಶಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿಲ್ಲ.

ಈ ಹಿನ್ನೆಲೆಯಲ್ಲಿ, ಸಂಬಂಧಿತ ಸಂಘಗಳನ್ನು ಸಮಾಪನೆಗೊಳಿಸಲು ಪ್ರಸ್ತಾವನೆಗಳನ್ನು ಸಹಕಾರ ಸಂಘಗಳ ಉಪನಿಬಂಧಕರವರಿಗೆ ಸಲ್ಲಿಸಲು ಅವಕಾಶ ನೀಡಲಾಗಿದೆ. ಯಾರಿಗಾದರೂ ಯಾವುದೇ ಆಕ್ಷೇಪಣೆಗಳಿದ್ದಲ್ಲಿ, ಗದಗ ಜಿಲ್ಲೆಯ ಉಪನಿಬಂಧಕರ ಕಚೇರಿಗೆ ಖುದ್ದಾಗಿ ಹಾಜರಾಗಿ ಸಲ್ಲಿಸಬಹುದು.

ಸಮಾಪನೆಗೆ ಪ್ರಸ್ತಾವಿತ ಸಹಕಾರ ಸಂಘಗಳ ಪಟ್ಟಿ:

1. ಹಾಲು ಉತ್ಪಾದಕರ ಸಹಕಾರ ಸಂಘ ನಿ., ಬಟ್ಟೂರು (ತಾ: ಶಿರಹಟ್ಟಿ)
2. ಹಾಲು ಉತ್ಪಾದಕರ ಸಹಕಾರ ಸಂಘ ನಿ., ಲಕ್ಷ್ಮೇಶ್ವರ
3. ಹಾಲು ಉತ್ಪಾದಕರ ಸಹಕಾರ ಸಂಘ ನಿ., ಮದಗಾನೂರು (ತಾ: ಗದಗ)
4. ಮೌಲಾನ ಆಝಾದ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಗದಗ
5. ಜರ್ನಲಿಸ್ಟ್ ಎಂಪ್ಲಾಯಿಜ್ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಗದಗ-ಬೆಟಗೇರಿ
6. ಗ್ರೂಪ್ ವಡ್ಡರ ಕೂಲಿಕಾರರ ಸಹಕಾರ ಸಂಘ ನಿ., ಚಿಂಚಲಿ (ತಾ: ಗದಗ)
7. ಅರುಣೋದಯ ಖಾದಿ ಗ್ರಾಮೋದ್ಯೋಗ ಕೈಗಾರಿಕಾ ಸಹಕಾರ ಸಂಘ ನಿ., ಶಿಗ್ಗಿ (ತಾ: ಲಕ್ಷ್ಮೇಶ್ವರ)
8. ಲಕ್ಷ್ಮೀ ಕೋ-ಆಪ್ ಕ್ರೆಡಿಟ್ ಸೊಸೈಟಿ ನಿ., ಶಿರೋಳ (ತಾ: ನರಗುಂದ)
9. ಶ್ರೀ ಜಗದ್ಗುರು ಮೌನೇಶ್ವರ ಕೋ-ಆಪ್ ಕ್ರೆಡಿಟ್ ಸೊಸೈಟಿ ನಿ., ನರಗುಂದ
10. ಶಿರೋಳ ಕೋ-ಆಪ್ ಕ್ರೆಡಿಟ್ ಸೊಸೈಟಿ ನಿ., ಶಿರೋಳ (ತಾ: ನರಗುಂದ)
11. ನರಗುಂದ ತಾಲೂಕು ಶ್ರೀ ಕನಕದಾಸ ಕುರಿ ಸಾಕಾಣಿಕೆ ಹಾಗೂ ಉಣ್ಣೆ ಉತ್ಪಾದಕರ ಸಹಕಾರ ಸಂಘ ನಿ., ನರಗುಂದ
12. ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ., ಕಪ್ಪಲಿ (ತಾ: ನರಗುಂದ)
13. ಶ್ರೀ ಬಸವೇಶ್ವರ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಚಿಕ್ಕನರಗುಂದ (ತಾ: ನರಗುಂದ)
14. ಮುಂಡರಗಿ ತಾಲೂಕು ಒಡ್ಡರ ಹಿಂದುಳಿದ ಸಮಾಜದ ಸ್ಟೋನ್ ಕಟರ್ಸ್ & ಅರ್ಥ ಡಿಗ್ಗರ್ ಕೋ-ಆಪ್ ಸೊಸೈಟಿ ನಿ., ಹಿರೇವಡ್ಡಟ್ಟಿ (ತಾ: ಮುಂಡರಗಿ)
15. ಸನ್ಮಾರ್ಗ ಮಹಿಳಾ ಕ್ರೆಡಿಟ್ ಕೋ-ಆಪ್ ಸೊಸೈಟಿ ನಿ., ಗದಗ
16. ಶಿರಹಟ್ಟಿ ಮಹಿಳಾ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಶಿರಹಟ್ಟಿ
17. ವೈಷ್ಣವಿ ವಿದ್ಯುತ್ ಮಗ್ಗ ನೇಕಾರರ ಮತ್ತು ಜವಳಿ ಉತ್ಪಾದಕರ ಮಹಿಳಾ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಶಿಗ್ಗಿ (ತಾ: ಲಕ್ಷ್ಮೇಶ್ವರ)
18. ಪ್ರಕೃತಿ ಕ್ರೆಡಿಟ್ ಕೋ-ಆಪ್ ಸೊಸೈಟಿ ನಿ., ಯಳವತ್ತಿ (ತಾ: ಲಕ್ಷ್ಮೇಶ್ವರ)
19. ಕೈಮಗ್ಗ ನೇಕಾರರ ಉತ್ಪಾದಕರ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಶಿಗ್ಗಿ (ತಾ: ಲಕ್ಷ್ಮೇಶ್ವರ)
20. ಆರ್ಟ್ಸ್ ಕಾಲೇಜ್ ನೌಕರರ ಪತ್ತಿನ ಸಹಕಾರ ಸಂಘ ನಿ., ಲಕ್ಷ್ಮೇಶ್ವರ
21. ಲಕ್ಷ್ಮೇಶ್ವರ ಉಮಾ ವಿದ್ಯಾಲಯ ಹೆಚ್.ಎಸ್. ನೌಕರರ ಪತ್ತಿನ ಸಹಕಾರ ಸಂಘ ನಿ., ಲಕ್ಷ್ಮೇಶ್ವರ
22. ಸೃಷ್ಟಿ ಕೋ-ಆಪ್ ಕ್ರೆಡಿಟ್ ಸೊಸೈಟಿ (ಪ.ಜಾತಿ) ಲಿ., ಗದಗ
23. ಕಾಮಧೇನು ಕೋ-ಆಪ್ ಕ್ರೆಡಿಟ್ ಸೊಸೈಟಿ ನಿ., ಗದಗ
24. ಸ್ವಾವಲಂಬಿ ಅಂಗವಿಕಲರ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಶಿರಹಟ್ಟಿ
25. ಜನತಾ ವಿದ್ಯಾವರ್ಧಕ ಬಿ.ಎಚ್. ಪಾಟೀಲ ಸಂಯುಕ್ತ ಪದವಿ ಪೂರ್ವ ಕಾಲೇಜ್ ಎಂಪ್ಲಾಯಿಜ್ ಕ್ರೆಡಿಟ್ ಕೋ-ಆಪ್ ಸೊಸೈಟಿ ಲಿ., ಲಕ್ಕುಂಡಿ (ತಾ: ಗದಗ)
26. ಶ್ರೀ ಮಹಾಲಕ್ಷ್ಮೀ ಮಹಿಳಾ ವಿವಿದೋದ್ದೇಶಗಳ ಸಹಕಾರ ಸಂಘ ನಿ., ಗದಗ
27. ಎಣ್ಣೆ ಬೆಳೆಗಾರರ ಸಹಕಾರ ಸಂಘ, ಲಕ್ಕುಂಡಿ (ತಾ: ಗದಗ)

ಸಂಬಂಧಪಟ್ಟವರು ಕಚೇರಿ ವೇಳೆಯಲ್ಲಿ ಸಹಾಯಕ ನಿಬಂಧಕರ ಕಚೇರಿ, ಸಹಕಾರ ಸಂಘಗಳು, ಗದಗ ಉಪ ವಿಭಾಗ

(ಎ.ಪಿ.ಎಂ.ಸಿ. ಯಾರ್ಡ್, ರೆಡ್ಡಿ ಬ್ಯಾಂಕ್ ಎದುರು) ಇವರನ್ನು ಸಂಪರ್ಕಿಸಬಹುದು. 7 ದಿನಗಳೊಳಗಾಗಿ ಹಾಜರಾಗಬೇಕು. ಸಂಬಂಧಪಟ್ಟವರು ಹಾಜರಾಗದಿದ್ದಲ್ಲಿ, ಸಂಘಗಳನ್ನು ಸಮಾಪನೆಗೊಳಿಸಲು ಕ್ರಮ ಕೈಗೊಳ್ಳಲಾಗುವುದು. ಮುಂದೆ ಉಂಟಾಗುವ ಯಾವುದೇ ಹೊಣೆಗಾರಿಕೆಗಳಿಗೆ ಸಮಾಪನಾಧಿಕಾರಿಗಳು ಹೊಣೆಗಾರರಾಗಿರುವುದಿಲ್ಲ ಎಂದು ಸಹಕಾರ ಸಂಘಗಳ ಸಹಾಯಕ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಹೊಳೆಆಲೂರಿನಲ್ಲಿ ಪ್ರತಿಭಾ ಪುರಸ್ಕಾರ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಹೊಳೆಆಲೂರು

ಇಲ್ಲಿನ ಶ್ರೀ ಯಚ್ಚರೇಶ್ವರ ಶಿಶುವಿಹಾರ ವತಿಯಿಂದ ಫೆಬ್ರವರಿ 24ರಂದು ಮಧ್ಯಾಹ್ನ 2 ಗಂಟೆಗೆ ಶಾಲಾ ಸಭಾಭವನದಲ್ಲಿ "ಕನ್ನಡ ಹಾಗೂ ಗಣಿತ ಪ್ರತಿಭಾ ಪುರಸ್ಕಾರ ಸಮಾರಂಭ, ಹಸ್ತಪತ್ರಿಕೆ ಬಿಡುಗಡೆ ಹಾಗೂ ಸರಸ್ವತಿ ಪೂಜಾ ಸಮಾರಂಭ" ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎ.ಎನ್. ಬಡಿಗೇರ ವಹಿಸಲಿದ್ದು, ಉದ್ಘಾಟಕರಾಗಿ ಮಹರ್ಷಿ ವಾಲ್ಮೀಕಿ ನಾಯಕ ಸಂಘದ ಗೌರವ ಅಧ್ಯಕ್ಷ ಬಸವಂತಪ್ಪ ಎಚ್. ತಳವಾರ ಭಾಗವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಿ.ಪಿ.ಐ ವಿಜಯಕುಮಾರ ನಾಯಕ, ಪಿ.ಡಿ.ಓ ಬಸವರಾಜ ಗಿರತಮ್ಮಣ್ಣವರ, ಕೆ.ಸಿ. ಹಿರೇಮಠಪಾಟೀಲ, ಪಾಂಡುರಂಗ ಪತ್ತಾರ, ಡಿ.ಆರ್. ನಾಯಕ, ಎಸ್.ಎಲ್. ಬದಾಮಿ, ಕೆ.ಬಿ. ಸಾಸಳ್ಳಿ ಹಾಗೂ ಸುರೇಶ್ ಗಾಣಿಗೇರ ಉಪಸ್ಥಿತರಿರುವರು.

ಈ ಸಂದರ್ಭದಲ್ಲಿ ಕನ್ನಡ ಹಾಗೂ ಗಣಿತ ವಿಷಯಗಳಲ್ಲಿ ಸಾಧನೆಗೈದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪುರಸ್ಕಾರ ಪ್ರದಾನ ಮಾಡಲಾಗುತ್ತದೆ. ಜೊತೆಗೆ ಶಾಲೆಯ ಹಸ್ತಪತ್ರಿಕೆ ಬಿಡುಗಡೆ ಹಾಗೂ ಸರಸ್ವತಿ ಪೂಜೆಯೂ ನಡೆಯಲಿದೆ.

ಈ ಕುರಿತು ಕನ್ನಡ ಭಾಷಾ ವಿಭಾಗದ ಮುಖ್ಯಸ್ಥ ಎಸ್.ಕೆ. ಆಡಿನ ಹಾಗೂ ಗಣಿತ ವಿಭಾಗದ ಮುಖ್ಯಸ್ಥ ಎಂ.ವಿ. ಮೆಣಸಗಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಂಚ ಗ್ಯಾರಂಟಿ ಬಡವರ ಬದುಕಿನ ಬೆಳಕು

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರಕಾರದ ಪಂಚ ಗ್ಯಾರಂಟಿ ಯೋಜನೆಗಳು ಬಡವರ ಪಾಲಿನ ಸಂಜೀವಿನಿ, ಬಡ ಜನರ ಆಶಾಕಿರಣವಾಗಿದೆ ಎಂದು ಗದಗ ತಾಲೂಕಾ ಪಂಚ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಪ್ರೊ. ಸಂಗಮೇಶ ಹಾದಿಮನಿ ಅಭಿಪ್ರಾಯಪಟ್ಟಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ನುಡಿದಂತೆ ನಡೆದ ಸರಕಾರ ಇದಾಗಿದೆ. ಗೃಹಲಕ್ಷ್ಮೀ ಯೋಜನೆ, ಯುವನಿಧಿ ಯೋಜನೆ, ಶಕ್ತಿ ಯೋಜನೆ, ಅನ್ನಭಾಗ್ಯ ಯೋಜನೆ, ಗೃಹಜ್ಯೋತಿ ಯೋಜನೆಗಳ ಮೂಲಕ ಜನರ ವಿಶ್ವಾಸಗಳಿಸುವುದರ ಜೊತೆಗೆ ನಾವು ನಿಮ್ಮ ನೋವಿನಲ್ಲೂ ಜೊತೆಗಿದ್ದೇವೆ ಎಂಬ ಭರವಸೆಯೊಂದಿಗೆ ಸ್ವಾವಲಂಬಿ ಜೀವನ ನಡೆಸಲು ಹಾಗೂ ಆತ್ಮವಿಶ್ವಾಸದಿಂದ ಬದುಕಲು ಸಹಕಾರಿಯಾಗಿದೆ ಎಂದು ಫಲಾನುಭವಿಗಳು ಹೇಳುವಾಗ ಅವರ ಮುಖದಲ್ಲಿನ ಮಂದಹಾಸ ಆತ್ಮತೃಪ್ತಿ ನೀಡುತ್ತದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

# ಎಂಎಸ್‌ಎಂಇಗಳಿಗೆ ಕಾರ್ಯಾಗಾರ



■ವಿಜಯಸಾಕ್ಷಿ ಸುದ್ದಿ, ಗದಗ

ಎಂಎಸ್‌ಎಂಇಗಳಿಗೆ ಸಹಕಾರಿಯಾಗುವ ಉದ್ದೇಶದಿಂದ ಜಿಲ್ಲೆಯ ಎಂಎಸ್‌ಎಂಇಗಳಿಗೆ ರೈಸಿಂಗ್ ಮತ್ತು ಎಕ್ಸಲೇರೇಟಿಂಗ್ ಎಂಎಸ್‌ಎಂಇ ಫರ್ಫಾಮೆನ್ಸ್ (RAMP) ಯೋಜನೆಯಡಿಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಗದಗ ಹಾಗೂ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಶನ್ & ಅಡ್ವರ್ಟೈಜಿಂಗ್ ಲಿ.ಬೆಂಗಳೂರ ಇವರ ಸಹಯೋಗದಲ್ಲಿ ಇಎಸ್‌ಎಂ ವಿಷಯದ ಕುರಿತು ಶಿಗ್ಲಿ ಗ್ರಾಮದಲ್ಲಿ ಕಾರ್ಯಾಗಾರ ಆಯೋಜಿಸಲಾಗಿತ್ತು.

ಕಾರ್ಯಾಗಾರದಲ್ಲಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಪಿ.ಬಾರಿಗಿಡದ, ರಾಜು ಓಲೇಕಾರ, ದೊಡ್ಡಪ್ಪ ವಾಲ್ಮೀಕಿ ಹಾಗೂ ಮಹದೇವ ಬದಾಮಿ ಭಾಗವಹಿಸಿದ್ದರು. ಸಂಪನ್ಮೂಲ ವ್ಯಕ್ತಿಗಳಾದ ಎಸ್.ಎಸ್. ಮೂರ್ತಿ ಇಎಸ್‌ಎಂ ಬಗ್ಗೆ ಉಪನ್ಯಾಸ ನೀಡಿದರು. ಕಾರ್ಯಾಗಾರದಲ್ಲಿ ಶಿಗ್ಲಿ ಗ್ರಾಮದ ಎಂಎಸ್‌ಎಂಇಗಳು ಭಾಗವಹಿಸಿದ್ದರು.


ಕರ್ನಾಟಕ ಸರ್ಕಾರ

**ಕಾರ್ಯನಿರ್ವಾಹಕ ಇಂಜಿನೀಯರರು,**

**ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ ವಿಭಾಗ, ಗದಗ**

ಕಾ.ಇ: ಗ್ರಾ.ಕು.ನೀ&ನೈ.ವಿ/ಗದಗ/ಸ.ಇಂ/ಟೆಂಡರ್/2025-26/ 2133 ದಿನಾಂಕ : 23.02.2026

**ಟೆಂಡರ್ ಪ್ರಕಟಣೆ**

ಪಂಚಾಯತ ರಾಜ್ ಇಂಜಿನೀಯರಿಂಗ ಇಲಾಖೆಯಲ್ಲಿ ನೋಂದಾಯಿಸಿದ ಗುತ್ತಿಗೆದಾರರಿಂದ ಐಟಂ ದರದಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ-2000 ಮತ್ತು ಇತ್ತೀಚಿನ ತಿದ್ದುಪಡಿಗಳಂತೆ, ಕುಡಿಯುವ ನೀರು ಸರಬರಾಜು ಯೋಜನೆ ಅಡಿಯಲ್ಲಿ ಗದಗ ಜಿಲ್ಲೆಯ ಈ ಕೆಳಗಿನ ಕಾಮಗಾರಿಯ ಟೆಂಡರನ್ನು "ಇ **ಪ್ರೊಕ್ಯುರಮೆಂಟ್-2**" ಮುಖಾಂತರ ಕರೆಯಲಾಗಿದೆ.

| ಕ್ರ. ಸಂ | ಇಂಡೆಂಟ್ ಸಂಖ್ಯೆ/ಕಾಮಗಾರಿಯ ಹೆಸರು | ಟೆಂಡರಗಿಟ್ಟ ಮೊತ್ತ (ಲಕ್ಷಗಳು) | ಮುಂಗಡ ಠೇವಣಿ ಮೊತ್ತ (ಲಕ್ಷಗಳು) |
|---|---|---|---|
| 1 | Construction of GLSR and Providing distribution pipe line at Hamalar colony in Purathageri village in Ron Taluk. (Reserved For ST Category Contractor) | **16.91** | **0.22** |

ಈ ಕಾಮಗಾರಿಗಳ ವಿವರಗಳಿಗಾಗಿ ಹಾಗೂ ಡೌನಲೋಡ ಮಾಡಿಕೊಳ್ಳಲು ಗುತ್ತಿಗೆದಾರರು ಕರ್ನಾಟಕ ಸರಕಾರದ "ಇ **ಪ್ರೋಕ್ಯೂರಮೆಂಟ್**" ವೆಬ್‌ಸೈಟ್ **https://kppp.karnataka.gov.in** ನಲ್ಲಿ ನೋಡಿಕೊಳ್ಳಬಹುದು. ಟೆಂಡರ ಸಲ್ಲಿಸಲು ಪ್ರಾರಂಭವಾಗುವ ದಿನಾಂಕ : **25.02.2026,** ಪ್ರಶ್ನೋತ್ತರದ ಕೊನೆಯ ದಿನಾಂಕ : **03.03.2026**. ಟೆಂಡರ ಸ್ವೀಕರಿಸುವ ಕೊನೆಯ ದಿನಾಂಕ : **05.03.2026**, ತಾಂತ್ರಿಕ ತೆರೆಯುವ ದಿನಾಂಕ : **07.03.2026** & ಆರ್ಥಿಕ ಬಿಡ್ ತೆರೆಯುವ ದಿನಾಂಕ : **09.03.2026.**

**ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,**

**ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ಗದಗ**

ವಾಸಾಸಂಇ/ಗದಗ/ಕೆಎಸ್‌ಎಂಸಿಎ/670/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka